ಸಂಪುಟ : 9 ಸಂಚಿಕೆ 200 ಪುಟ : 4 ಬೆಲೆ: 3.00 ಮಂಗಳವಾರ ಸೆಪ್ಟೆಂಬರ್ 17 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ





Volume : 9 Issue : 200 Pages : 4 Price : 3.00 Tuesday september 17 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪ್ರವಾದಿ ಹಜರತ್ ಮುಹಮ್ಮದ್ ಪೈಗಂಬರರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

## ಪ್ರವಾದಿಗಳ ಕೊಡುಗೆಗಳನ್ನು ಅರ್ಥೈಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಮುಹಮ್ಮದ ಪೈಗಂಬರ್ ಮನುಕುಲದ ಪ್ರವಾದಿಯಾಗಿ, ಶಾಂತಿದೂತರಾಗಿ ಜಗತ್ತಿಗೆ ನೀಡಿದ ಕೊಡುಗೆಗಳನ್ನು ನಾವಿಂದು ಅರ್ಥ ಮಾಡಿಕೊಳ್ಳಬೇಕಿದೆ. ಸರ್ವ ಧರ್ಮಗಳನ್ನು ಗೌರವಿಸುವ ಮೂಲಕ ನಾವು ಸುಂದರ ಸಮಾಜವನ್ನು ಕಟ್ಟಬೇಕಾಗಿದೆ. ಮಹಮ್ಮದ್ ಪೈಗಂಬರ್ ಅವರ ಸಿದ್ಧಾಂತ ಕೇವಲ ಆಧ್ಯಾತ್ಮ ಸಿದ್ಧಾಂತವಾಗಿರಲಿಲ್ಲ. ಮಸೀದಿ, ಮದರಸಾ, ಧಾರ್ಮಿಕ ಆಚಾರ-ವಿಚಾರಗಳನ್ನು ಪಸರಿಸುವ ಸಿದ್ಧಾಂತವಾಗಿದೆ. ಹೀಗಾಗಿ, ಎಲ್ಲ ಧರ್ಮದವರೂ ಸೇರಿ ಈ ಹಬ್ಬವನ್ನು ಆಚರಣೆ ಮಾಡಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಆಶಿಸಿದರು.



ಸೋಮವಾರ ನಗರದ ಹಳೇ ಬಸ್ ನಿಲ್ದಾಣದ ಬಳಿಯ ಉರ್ದು ಶಾಲಾ ಆವರಣದಲ್ಲಿ ಈದ್ ಮಿಲಾದ್ ಕಮಿಟಿಯಿಂದ ಪ್ರವಾದಿ ಹಜರತ್ ಮೊಹಮ್ಮದ್ ಪೈಗಂಬರ್ ಅವರ ಜಯಂತ್ಯುತ್ಸವ, ನೋಟ್ ಬುಕ್ ವಿತರಣೆ, ಮುಸಲ್ಮಾನ ಬಡ ಮಹಿಳೆಯರಿಗೆ ಸೀರೆಗಳು, ಮದರಸಾ ಮಕ್ಕಳಿಗೆ ಬಟ್ಟೆ ವಿತರಣೆ, ರಕ್ತ ತಪಾಸಣೆ, ಅನ್ನ ಸಂತರ್ಪಣೆ ಕಾರ್ಯಕ್ರಮ ಉದ್ಘಾಟಿಸಿ ಸಚಿವರು ಮಾತನಾಡಿದರು.

ನಾವು ಇಂದು ಸಾಮಾಜಿಕ ಜೀವನದಲ್ಲಿ ಇರುವುದರಿಂದ ನಾವಾಡುವ ಮಾತುಗಳ ಮೇಲೆ ಹತೋಟಿ ಇಟ್ಟುಕೊಳ್ಳಬೇಕು. ಒಂದು ವೇಳೆ ನಾಲಿಗೆ ಮೇಲೆ ಹತೋಟಿ ತಪ್ಪಿದರೆ ಜೈಲು ಅನಿವಾರ್ಯವಾಗುತ್ತದೆ. ಕೆಟ್ಟ ವಿಚಾರಕ್ಕೆ ಜೈಲು ಒಂದು ಪರಿಹಾರವಲ್ಲ. ಕುರಾನ್‌ನಲ್ಲಿರುವ ತತ್ವ-ಆದರ್ಶಗಳನ್ನು ಅಳವಡಿಸಿಕೊಂಡು ಉತ್ತಮ



ರೀತಿಯಲ್ಲಿ ನಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಳೆದ 45 ವರ್ಷಗಳಿಂದ ಇಲ್ಲಿನ ಉರ್ದು ಶಾಲಾ ಆವರಣದಲ್ಲಿ ಈದ್ ಮಿಲಾದ್ ಕಾರ್ಯಕ್ರಮ ಹಮ್ಮಿಕೊಂಡು ಬರಲಾಗುತ್ತಿದೆ. ಇಷ್ಟು ವರ್ಷಗಳಲ್ಲಿ ಇದೇ ಸಲ ಸಮುದಾಯ ಭವನ ನಿರ್ಮಾಣ ಮಾಡಲು ನಗರದಲ್ಲಿ ಜಾಗ ನೀಡುವಂತೆ ಈದ್ ಮಿಲಾದ್ ಕಮಿಟಿಯಿಂದ ಮನವಿ ನೀಡಲಾಗಿದೆ. ಸಮಾಜವನ್ನು ಜಾಗೃತಿ ಮಾಡುವ ಕೆಲಸವನ್ನು ಮಾಡಲಾಗುತ್ತದೆ. ಮುಂದಿನ ಮೂರು ತಿಂಗಳಲ್ಲಿ ನಗರದ ವಿವಿಧ ಭಾಗಗಳಲ್ಲಿ ಐದು ಕಡೆ ಜಾಗ ಗುರುತಿಸಬೇಕು. ಅದರಲ್ಲಿ ಒಂದು ಜಾಗವನ್ನು ನೀಡಲಾಗುತ್ತದೆ. ಜನವರಿ ಮೊದಲ ತಿಂಗಳಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಜಾಗ ಮಂಜೂರು ಮಾಡಲಾಗುತ್ತದೆ ಎಂದರು.

ಪ್ರಸಕ್ತ ವರ್ಷದಿಂದ ಈದ್ ಮಿಲಾದ್ ಕಮಿಟಿಯಿಂದ ಮಕ್ಕಳಿಗೆ ಪುಸ್ತಕ ವಿತರಿಸುತ್ತಿರುವ ಕೆಲಸ ಮಾಡುತ್ತಿರುವುದು ಉತ್ತಮವಾಗಿದೆ. ಮುಂದಿನ ವರ್ಷದಿಂದ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಮಕ್ಕಳಿಗೆ ವಿತರಣೆ ಮಾಡಬೇಕು. ಮಕ್ಕಳ ಶೈಕ್ಷಣಿಕ ವಸ್ತುಗಳ ಬಗ್ಗೆ ಹೆಚ್ಚು ಆಸಕ್ತಿ ವಹಿಸಬೇಕು. ಗ್ಯಾರಂಟಿ ಯೋಜನೆಯಿಂದ ಬಡ ಮಕ್ಕಳ ವಿದ್ಯಾಭ್ಯಾಸಕ್ಕೆ ಸಾಕಷ್ಟು ಅನೂಕುಲವಾಗಿದೆ ಎಂದರು.

ಮೌಲಾನ ನಿಜಾಮುದ್ದೀನ್ ಕಾಸ್ತಿ ಮಾತನಾಡಿದರು. ಮಹಮ್ಮದ ಇಸ್ಲಾಕ್ ಪುತ್ತೂರ ಪ್ರವಾದಿ ಮುಮಹ್ಮದ್ ಪೈಗಂಬರ್ ಅವರ ಜೀವನ ಚರಿತ್ರೆ ಬಗ್ಗೆ ಉಪನ್ಯಾಸ ನೀಡಿದರು. ಈದ್ ಮಿಲಾದ್ ಕಮಿಟಿ ಅಧ್ಯಕ್ಷ ಬಾಷಾಸಾಬ್ ಮಲ್ಲಸಮುದ್ರ, ಬಿ.ಬಿ. ಅಸೂಟಿ, ಯುಸೂಪ್ ಕೊಟ್ಟೂರ, ಶೌಕತ್ ಕಾತರಕಿ, ಆರೀಫ್ ಹುನಗುಂದ, ಕರಿಂಸಾಬ್ ಸುಣಗಾರ, ರಿಯಾಜಅಹ್ಮದ್ ಗುಡಿಸಲಮನಿ, ಅಕ್ಬರ್ ಅಲಿ ಅತ್ತಾರ, ಶಬ್ಬೀರ್ ಧಾರವಾಡ, ಚಾಂದಸಾಬ್ ಕೊಟ್ಟೂರ, ಮಲ್ಲಿಕಜಾನ್ ಬಾಗಲಕೋಟಿ, ಸಮೀರ್ ಅಗಸನಹಳ್ಳಿ, ದಾದಾಪೀರ್ ಮುಂಡರಗಿ ಮುಂತಾದವರಿದ್ದರು.

> ಜಯಂತಿಯ ನಿಮಿತ್ತ ಹಳೇ ಬಸ್ ನಿಲ್ದಾಣ ಸಮೀಪದ ಉರ್ದು ಶಾಲಾ ಆವರಣದಲ್ಲಿ ಈದ್ ಮಿಲಾದ್ ಕಮಿಟಿಯಿಂದ ವಿವಿಧ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಅದರಲ್ಲೂ ಉರ್ದು ಶಾಲೆಯ ಮಕ್ಕಳಿಗೆ 5 ಸಾವಿರ ನೋಟ್ ಬುಕ್ ವಿತರಣೆ, ಮುಸಲ್ಮಾನ ಬಡ ಮಹಿಳೆಯರಿಗೆ 250 ಸೀರೆಗಳು, 150 ಮದರಸಾ ಮಕ್ಕಳಿಗೆ ಬಟ್ಟೆ ವಿತರಣೆ, ಅನ್ನ ಸಂತರ್ಪಣೆ ಕಾರ್ಯಕ್ರಮ ಹಮ್ಮಿಕೊಂಡಿದ್ದರು. ರಕ್ತ ತಪಾಸಣೆ ಹಾಗೂ ಕಣ್ಣಿನ ತಪಾಸಣೆ ಕಾರ್ಯಕ್ರಮದಲ್ಲಿ ನೂರಾರು ಸಾರ್ವಜನಿಕರು ಭಾಗವಹಿಸಿದ್ದರು.

---

### ಹಿಂಗಾರು ಮಳೆ ಸಮೃದ್ಧಿಗೆ ಜೋಕುಮಾರನಿಗೆ ವಿಶೇಷ ಪೂಜೆ | ಹಳ್ಳಿ ಸೊಗಡಿನ ವಿಶಿಷ್ಟ ಹಬ್ಬ

## ಸರ್ಕಾರದಿಂದಲೇ ಆರ್ಥಿಕ ಸಹಾಯ ಸಿಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಎಲ್ಲಾ ಗ್ರಾಮೀಣ ಪ್ರದೇಶಗಳಲ್ಲಿ ಅದರಲ್ಲೂ ವಿಶೇಷವಾಗಿ ಗದಗ ಸಮೀಪದ ತಿಮ್ಮಾಪೂರ ಗ್ರಾಮದಲ್ಲಿ ಶ್ರಾವಣ ಮಾಸದ ಮುಕ್ತಾಯದ ನಂತರ ಬರುವ ಗಣೇಶ ಚತುರ್ಥಿಯ 5ನೇ ದಿನವಾದ ಅಷ್ಟಮಿಯಂದು ಬರುವ ಹಬ್ಬ ಜೋಕುಮಾರ ಸ್ವಾಮಿಯ ಹಬ್ಬ.ಇದು ಗ್ರಾಮೀಣ ಭಾಗದ ಹಳ್ಳಿಗಳ ಸೊಗಡಿನಲ್ಲಿ ವಿಶೇಷವಾಗಿ ಆಚರಿಸಲಾಗುತ್ತದೆ. 7 ದಿನಗಳ ಕಾಲ ಆಚರಣೆ ಮಾಡುವ ಜೋಕುಮಾರ ಸ್ವಾಮಿಯ ಹಬ್ಬದಲ್ಲಿ ಅನೇಕ ಜನಪದ ಹಾಡುಗಳು ಹಾಡುತ್ತಾ ಕಾಲ ಕಳೆಯುವದೇ ಚಂದ. ಗಣೇಶ ಚತುರ್ಥಿಯ 5 ದಿನ ಈ ಜೋಕುಮಾರ ಸ್ವಾಮಿ ಕುಂಬಾರನ ಮನೆಯಲ್ಲಿ ಹುಟ್ಟುತ್ತಾನೆ ನಂತರ ಅಂಬಿಗರ ಮನೆಯಲ್ಲಿ ಬೆಳೆಯುತ್ತಾನೆ. ನಂತರ ಜೋಕುಮಾರನನ್ನು ಬಿದಿರಿನ ಬುಟ್ಟಿಯಲ್ಲಿ ಪ್ರತಿಷ್ಠಾಪಿಸಿ ಬೇವಿನ ತಪ್ಪಲಿನಿಂದ ಆತನ್ನು ಅಲಂಕರಿಸಿ ಮೂರ್ತಿಗೆ ಕಪ್ಪು ಬಣ್ಣ ಹಚ್ಚಿ ಬಾಯಿಗೆ ಬೆಣ್ಣೆಯನ್ನು ಸವರಿ ಕುಂಚಿಗೆ ಕುಲಾಯಿ ಕಟಿ ವಿಭಿನ್ನವಾಗಿ ಸಿಂಗರಿಸಲಾಗುತ್ತದೆ. ಗ್ರಾಮದ ದೇವಮ್ಮ ಮರಮಣ್ಣವರ ಹಾಗೂ ಸಂಗಡಿಗರು ಜೊತೆಗೂಡಿ ಜೋಕುಮಾರ ಸ್ವಾಮಿಯ ಬುಟ್ಟಿಯನ್ನು ತಲೆಯ ಮೇಲೆ ಹೊತ್ತುಕೊಂಡು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಅಲ್ಲಲ್ಲಿ ಪ್ರಮುಖ ಸ್ಥಳಗಳಲ್ಲಿ ಜೋಕುಮಾರ ಸ್ವಾಮಿಯನ್ನು ಕುಡಿಸಿ ಅನೇಕ ಜನಪದ ಹಾಡುಗಳನ್ನು ಹಾಡುತ್ತಾರೆ.ರೈತ ಮಹಿಳೆಯರು ಜೋಕುಮಾರನಿಗೆ ಪೂಜೆ ಮಾಡಿ ತಮ್ಮಲ್ಲಿ ಇದ್ದ ಧವಸ-ಧಾನ್ಯಗಳನ್ನು ನೀಡಿ ಮುಂದಿನ ಹಿಂಗಾರು ಮಳೆ ಸಂಪೂರ್ಣವಾಗಿ, ಬೆಳೆ ಚೆನ್ನಾಗಿ ಬರಲಿ ಎಂದು ಬೇಡಿಕೊಳ್ಳುತ್ತಾರೆ. ಭಕ್ತರಿಗೆ ಬೇವಿನ ಪತ್ರಿ ಹಾಗೂ ಅಂಬಲಿಯನ್ನು ಪ್ರಸಾದವಾಗಿ ನೀಡುತ್ತಾರೆ. 7ನೇ ದಿನ ಹುಣ್ಣಿಮೆಯ ದಿನ ಸಂಜೆ ಜೋಕುಮಾರ ದಲಿತ ಸಮುದಾಯದ ಮಹಿಳೆಯರ ಕೈಗೆ ಸಿಗುತ್ತಾನೆ. ಅವರು ಅಗಸರ ದೋಣಿಯಲ್ಲಿ ಹಾಕಿ ತಲೆಗೆ ಒನಕೆಯಿಂದ ಹೊಡೆದು ಸಾಯಿಸುತ್ತಾರೆ.

> ಈ ಆಚರಣೆಯ ಬಗ್ಗೆ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಗದಗ ಜಿಲ್ಲಾ ರೈತ ಸಂಘದ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಕರುನಾಡಿನ ಜನಪದ ಸಂಸ್ಕೃತಿಯ ವೈಶಿಷ್ಟ್ಯಗಳಲ್ಲಿ ಒಂದಾದ ಜೋಕುಮಾರ ಸ್ವಾಮಿಯ ಪರಂಪರೆಯ ಹಬ್ಬ ಉಳಿಯಬೇಕಾದರೆ ಜೋಕುಮಾರನ ಸೇವೆ ಮಾಡುವ ಬಾರಕೇರ ಮನೆತನದವರಿಗೆ ಸರ್ಕಾರದಿಂದಲೇ ಆರ್ಥಿಕ ಸಹಾಯ ನೀಡಬೇಕು. ಅಂದಾಗ ಮಾತ್ರ ಗ್ರಾಮೀಣ ಭಾಗದ ಇಂತಹ ಸಂಸ್ಕೃತಿಗಳು ಉಳಿಯಲು ಸಾಧ್ಯವಾಗುತ್ತದೆ ಎಂದು ಮನವಿ ಮಾಡಿದರು.

---

### ಮುಹಮ್ಮದ ಪೈಗಂಬರರ ಜಯಂತಿಯ ಅಂಗವಾಗಿ ರಕ್ತದಾನ ಶಿಬಿರ

## ಪ್ರತಿಯೊಬ್ಬರೂ ಸಂಸ್ಕಾರ ಹೊಂದುವುದು ಮುಖ್ಯ

■ವಿಜಯಸಾಕ್ಷಿ ಸುದ್ದಿ, ಡಂಬಳ

ಜಗತ್ತಿಗೆ ಮಾನವೀಯತೆಯ ಬೆಳಕು ಪಸರಿಸಿ ವಿಶ್ವದ ಜನತೆಗೆ ಸುಖ, ಶಾಂತಿ, ಸಮೃದ್ಧಿ ನೀಡಲಿ ಎಂದು ಸಾರಿದ್ದ ಪ್ರವಾದಿ ಮುಹಮ್ಮದ ಪೈಗಂಬರರು ವಿಶ್ವಕ್ಕೆ ಶಾಂತಿ, ಸನ್ಮಾರ್ಗ ತೋರಿದ್ದಾರೆ ಎಂದು ಡಾ.ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಹೇಳಿದರು.

ಡಂಬಳ ಗ್ರಾಮದ ಜಾಮಿಯಾ ಮಸೀದಿಯ ಆವರಣದಲ್ಲಿ ಮುಹಮ್ಮದ ಪೈಗಂಬರರ ಜಯಂತಿಯ ಅಂಗವಾಗಿ ಅಂಜುಮನ್-ಎ-ಇಸ್ಲಾಂ ಕಮಿಟಿ ಯುವಕರು ಮತ್ತು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಆಸ್ಪತ್ರೆ ರಕ್ತನಿಧಿ ಗದಗ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಉಚಿತ ರಕ್ತದಾನ ಶಿಬಿರ ಹಾಗೂ ಧಾರ್ಮಿಕ ಕಟ್ಟಡ ಉದ್ಘಾಟನಾ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಪ್ರತಿಯೊಂದು ಧಾರ್ಮಿಕ ವ್ಯವಸ್ಥೆಯಲ್ಲಿ ಸಂಸ್ಕಾರ ಹೊಂದುವುದು ಬಹಳ ಮುಖ್ಯ. ಆ ಹಿನ್ನೆಲೆಯಲ್ಲಿ ಬಸವಾದಿ ಶಿವ ಶರಣರು, ಪೈಗಂಬರರು ಸೇರಿದಂತೆ ಹಲವಾರು ಶರಣರು ಉತ್ತಮ ಸಂಸ್ಕಾರದ ಬದುಕನ್ನು ಕಟ್ಟಿಕೊಳ್ಳುವಂತೆ ಸಾರಿದರು ಎಂದು ಹೇಳಿದರು.



ಬೆಳಗಟ್ಟಿಯ ಸೈಯದ್‌ಷಾ ಮುಸ್ತಾಫಾ ಖಾದ್ರಿ ಅವರು ಮಾತನಾಡಿ, ಮುಹಮ್ಮದ ಪೈಗಂಬರರ ಸಮಗ್ರ ಬೋಧನೆಗಳ ಕೇಂದ್ರ ಬಿಂದು ಮಾನವ. ಇಲ್ಲಿ ಯಾರೂ ಮೇಲಲ್ಲ, ಯಾರೂ ಕೀಳಲ್ಲ. ಬದಲಾಗಿ ಪ್ರತಿಯೊಬ್ಬರೂ ಶ್ರೇಷ್ಠರೇ ಎಂದು ಹೇಳಿದರು.

ಖಾದರಸಾಬ ಮುಲ್ಲಾ, ಗೋಣಿಬಸಪ್ಪ ಕೊರ್ಲಹಳ್ಳಿ ಮಾತನಾಡಿದರು. ಪೈಗಂಬರರ ಕುರಿತು ಇಬ್ರಾಹಿಂ ಬಾತಿಷ ಶಂಸಿ ಉಪನ್ಯಾಸ ನೀಡಿದರು. ಕಾರ್ಯಕ್ರಮಕ್ಕೂ ಮುನ್ನ ಜುಮ್ಮಾ ಮಸೀದಿಯಿಂದ ಹೊರಟ ಮೇರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. 30ಕ್ಕೂ ಹೆಚ್ಚು ಯುವಕರು ರಕ್ತದಾನವನ್ನು ಮಾಡಿದರು. ನಿವೃತ್ತಿ ಹೊಂದಿದ ಪೊಲೀಸರನ್ನು, ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಉರ್ದು ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಬಶೀರಹಮ್ಮದ ತಾಂಬೋಟಿ, ವಿ.ಎಸ್. ಯರಾಶಿ, ಸಿದ್ದಪ್ಪ ನಂಜಪ್ಪನವರ, ಮರಿತೆಮಪ್ಪ ಆದಮ್ಮನವರ, ಯುಸುಫ್ ಈಟಿ, ಮರಿಯಪ್ಪ ಸಿದ್ದಣ್ಣವರ, ಮಲ್ಲಪ್ಪ ಮಠದ, ಆರ್.ಜಿ. ಕೊರ್ಲಹಳ್ಳಿ, ಉಪತಹಸೀಲ್ದಾರ ಸಿ.ಕೆ. ಬೆಳವಟಗಿ, ಸಿಪಿಐ ಮಂಜುನಾಥ ಕುಸುಗಲ್ಲ, ಖಾಜಾಹುಸೇನ ಹೊಸಪೇಟಿ, ಬುಡ್ನೆಸಾಬ ಅತ್ತಾರ, ಹುಸೇನ ದೊಡ್ಡಮನಿ, ರಾಜಾಭಕ್ಷಿ ಡಾಲಾಯತ, ಆಶೀಫ್ ತಾಂಬೋಟಿ, ಇಸ್ಮಾಯಿಲ್ ಹೊಸಪೇಟಿ, ಇಜಾಜ ಮುಲ್ಲಾ, ಹುಸೇನಸಾಬ ಮೂಲಿಮನಿ, ಜಾಕೀರ ಮೂಲಿಮನಿ, ಹಮೀದ ಸರಕಾವಾಸ, ಬಾಬು ಸರಕಾವಾಸ, ಜಂದಿಸಾಬ ತಾಂಬೋಟಿ, ಮುರ್ತುಜಾ ಮನಿಯಾರ, ಗೌಸುಸಾಬ ಆಲೂರ, ಶಫೀಕ ಮೂಲಿಮನಿ, 1995-96ನೇಸಾಲಿನ ಹೈಸ್ಕೂಲ್‌ಗೆಳೆಯರಬಳಗ, ಸಮಿತಿಯ ಸದಸ್ಯರು, ಹಿರಿಯರು, ಮಹಿಳೆಯರು, ಇದ್ದರು.

> ಅರಬಿಯಾದ ಮರು ಭೂಮಿಯಲ್ಲಿ ಆಧ್ಯಾತ್ಮಿಕ ಸಾಮಾಜಿಕ ಮಾನವಿಯ ಭಾವೈಕ್ಯತೆಯ ಬದುಕನ್ನು ಕಟ್ಟುವ ನಿಟ್ಟಿನಲ್ಲಿ ಶ್ರಮಿಸಿದ ಪೈಗಂಬರರ ಬದುಕು ತೆರೆದ ಗ್ರಂಥವಾಗಿದೆ. ಭಾಷೆ, ವರ್ಗ, ಲಿಂಗ, ಕಪ್ಪು-ಬಿಳುಪು ಎನ್ನುವ ಬೇಧವಿಲ್ಲದೆ ಪ್ರತಿಯೊಬ್ಬ ಮಾನವನೂ ಉತ್ತಮ ಜೀವನ ನಡೆಸಬೇಕು ಎನ್ನುವ ಅವರ ಸಂದೇಶಗಳನ್ನು ಪಾಲಿಸಿ. ರಕ್ತವನ್ನು ಸೃಷ್ಟಿಸಲು ಕಾರ್ಖಾನೆಯಿಲ್ಲ. ಆದರೆ ಮನುಷ್ಯ ರಕ್ತ ದಾನ ಮಾಡಿದಾಗ ತೊಂದರೆಯಲ್ಲಿರುವವರನ್ನು ಬದುಕಿಸಲು ಸಾಧ್ಯ. ಆ ನಿಟ್ಟಿನಲ್ಲಿ ಪೈಗಂಬರರ ಜಯಂತಿಯಂದು ಶ್ರಮಿಸುತ್ತಿರುವುದು ಪ್ರಶಂಸನೀಯ.
>
> **- ಜಿ.ಎಸ್. ಪಾಟೀಲ.** ಶಾಸಕರು, ರೋಣ.

---

### ಶೃದ್ಧಾ-ಭಕ್ತಿಯಿಂದ ಮುಹಮ್ಮದ ಪೈಗಂಬರರ ಜನ್ಮದಿನ ಆಚರಣೆ

## ಪೈಗಂಬರರು ಸಮಾಜಕ್ಕೆ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾ ಮಾನವತಾವಾದಿ, ಶಾಂತಿದೂತ, ಪ್ರವಾದಿ ಮುಹಮ್ಮದ ಪೈಗಂಬರರ ಜನ್ಮದಿನದ ಅಂಗವಾಗಿ ಪವಿತ್ರ ಈದ್ ಮಿಲಾದ್ ಹಬ್ಬವನ್ನು ಮುಸ್ಲಿಂ ಸಮಾಜ ಬಾಂಧವರು ಸೋಮವಾರ ಶೃದ್ಧಾ-ಭಕ್ತಿ ಮತ್ತು ವಿಜೃಂಭಣೆಯಿಂದ ಆಚರಿಸಿದರು.

ಹೊಸ ಉಡುಗೆ ಧರಿಸಿದ ಮುಸ್ಲಿಂ ಸಮಾಜ ಬಾಂಧವರು ಬೆಳಿಗ್ಗೆ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ನಡೆಸಿದರು. ಬಳಿಕ ಪಟ್ಟಣದ ದೂದಪೀರಾಂ ದರ್ಗಾದಿಂದ ಮುಹಮ್ಮದ ಪೈಗಂಬರ ಭಾವಚಿತ್ರ ಮತ್ತು ಮುಸ್ಲಿಂ ಧರ್ಮದ ಪವಿತ್ರ ಕ್ಷೇತ್ರಗಳ ಚಿತ್ರಗಳನ್ನೊಳಗೊಂಡ ಮೆರವಣಿಗೆ ಮುಖ್ಯ ಬಜಾರ್ ರಸ್ತೆ, ಶಿಗ್ಲಿ ನಾಕಾ, ಗದಗ ನಾಕಾ, ಮೋಮಿನಗಲ್ಲಿ, ಬಳಿಗಾರ ಓಣಿಯ ಮೂಲಕ ಸಾಗಿ



ದರ್ಗಾದಲ್ಲಿ ಸಂಪನ್ನಗೊಂಡಿತು. ಅಂಜುಮನ್ ಏ-ಇಸ್ಲಾಂ ಕಮಿಟಿ, ದರ್ಗಾ ಕಮಿಟಿ ಹಾಗೂ ಹಿರಿಯರು, ಯುವಕರು, ಮಕ್ಕಳು ಸೇರಿ ಸಾವಿರಾರು ಸಂಖ್ಯೆಯ ಮುಸ್ಲಿಂ ಬಾಂಧವರು ಹೊಸ ಉಡುಗೆ ತೊಟ್ಟು ಪೈಗಂಬರರ ಗೀತೆಗಳೊಂದಿಗೆ ಘೋಷಣೆ ಕೂಗುತ್ತಾ ಹರ್ಷದಿಂದ ಪಾಲ್ಗೊಂಡಿದ್ದರು.


ಈ ಸಂದರ್ಭದಲ್ಲಿ ಅಂಜುಮನ್ ಕಮಿಟಿ ಅಧ್ಯಕ್ಷ ಎಂ.ಎಂ. ಗದಗ ಮಾತನಾಡಿ, ಮುಹಮ್ಮದ ಪೈಗಂಬರ್ ಅವರು ಇಡೀ ಮಾನವ ಕುಲದ ಒಳಿತಿಗಾಗಿ ಶಾಂತಿ, ಸಮಾನತೆಯ ಸಂದೇಶ ಸಾರಿದ್ದಾರೆ. ಸರಳ, ಸಚ್ಚಾರಿತ್ರ್ಯ ಮತ್ತು ತ್ಯಾಗಭರಿತ ಬದುಕನ್ನು ಸವೆಸಿದ ಅವರು ಮನುಕುಲದಲ್ಲಿ ಚಿರಸ್ಥಾಯಿಯಾಗಿದ್ದಾರೆ. ದೇವನ ಸಂದೇಶವಾಹಕರಾಗಿ ಮಾನವ ಸಮೂಹಕ್ಕೆ ಜ್ಞಾನದ ಬೆಳಕು ಮತ್ತು ಸನ್ಮಾರ್ಗದ ಹಾದಿಯನ್ನು ತೋರಿಸಿದ ಪೈಗಂಬರರ ಅಪ್ರತಿಮ ಪ್ರೀತಿ, ತಾಳ್ಮೆ, ಕ್ಷಮೆ, ವಿನಯ, ಕರುಣೆ ಮತ್ತು ಮಾನವೀಯ ಮೌಲ್ಯಗಳು ಸಮಾಜಕ್ಕೆ ದಾರಿದೀಪವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ದೂದನಾನಾದರ್ಗಾ ಸಮಿತಿ ಅಧ್ಯಕ್ಷ ಸುಲೇಮಾನ ಕಣಕೆ, ಪುರಸಭೆ ಉಪಾಧ್ಯಕ್ಷ ಫಿರ್ದೋಸ್ ಆಡೂರ, ಸದಸ್ಯರಾದ ಎಸ್.ಕೆ. ಹವಾಲ್ದಾರ, ಮುಸ್ತಾಕ್‌ಅಹ್ಮದ್ ಶಿರಹಟ್ಟಿ, ಸಿಕಂದರ ಕಣಕೆ, ಡಿ.ಜೆ. ಮುಚ್ಚಾಲೆ, ವೀರಕನ್ನಡಿಗ ಟಿಪ್ಪು ಸೇನೆ ಅಧ್ಯಕ್ಷ ಜಾಕೀರಹುಸೇನ್ ಹವಾಲ್ದಾರ, ಅಂಜುಮನ್ ಕಮಿಟಿ ಉಪಾಧ್ಯಕ್ಷ ಅಬ್ದುಲ್‌ಕರೀಂ ಸೂರಣಗಿ, ಎನ್.ಎಂ. ಗದಗ, ದಾದಾಪೀರ ತಂಬಾಕದ, ಇಕ್ಬಾಲ್ ಸೂರಣಗಿ, ಜಮೀಲ್ ಸೂರಣಗಿ, ಪೈಮ್ ಪಲ್ಲಿ, ಅಬ್ಜಲ್ ರಿತ್ತಿ ಮುಂತಾದವರಿದ್ದರು.

> ಮೆರವಣಿಗೆ ವೇಳೆ ಮುಸ್ಲಿಂ ಬಾಂಧವರು ಜನತೆಗೆ ಸಿಹಿ, ಹಣ್ಣು, ತಂಪುಪಾನೀಯ ವಿತರಿಸಿದರು. ಹಬ್ಬದ ಅಂಗವಾಗಿ ಪಟ್ಟಣದಲ್ಲಿರುವ ಮಸೀದಿ, ತಮ್ಮ ಅಂಗಡಿ, ಮನೆಗಳಿಗೆ ವಿದ್ಯುತ್, ಪುಷ್ಪಾಲಂಕಾರ ಮಾಡಲಾಗಿತ್ತು.



ಬೆಟಗೇರಿಯ ಈದಗಾ ಕಮಿಟಿ ವತಿಯಿಂದ ಸೋಮವಾರ ನಡೆದ ಪ್ರವಾದಿ ಮುಹಮ್ಮದ ಪೈಗಂಬರ್ ಜಯಂತಿಯಲ್ಲಿ ಮುಸ್ಲಿಂ ಧರ್ಮೀಯರ ಉಚಿತ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಈದಗಾ ಕಮಿಟಿಯ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷರಾದ ಪೀರಸಾಬ ಕೌತಾಳರನ್ನು ಸನ್ಮಾನಿಸಿ, ಗೌರವಿಸಿದರು.




ಲಕ್ಷ್ಮೇಶ್ವರದ ತಾಯಿ ಪಾರ್ವತಿ ಮಕ್ಕಳ ಬಳಗದ ವಿದ್ಯಾರ್ಥಿಗಳಿಂದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ವಿಶೇಷ ಮಾನವ ಸರಪಳಿ ರಚಿಸಿಲಾಯಿತು. ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ, ಆಯ್.ಬಿ. ಜಕ್ಕನಗೌಡರ, ಎಸ್.ಎಂ. ಹಾದಿಮನಿ, ಡಿ.ಜಿ. ವೈದ್ಯ, ಸ್ವಾತಿ ಪೈ ಸೇರಿ ಶಿಕ್ಷಕರು ಪಾಲ್ಗೊಂಡಿದ್ದರು.

## ಸಂಪಾದಕೀಯ

# ಕೇಜ್ರಿವಾಲ್ ಹೊಸ ನಾಟಕ

ಅಬಕಾರಿ ನೀತಿ ಹಗರಣದಲ್ಲಿ ಆರು ತಿಂಗಳ ಜೈಲುವಾಸ ಅನುಭವಿಸಿ ಜಾಮೀನಿನ ಮೇಲೆ ಹೊರಬಂದಿರುವ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್, ರಾಜೀನಾಮೆ ಎನ್ನುವ ನಾಟಕವನ್ನು ಆರಂಭಿಸಿದ್ದಾರೆ.

ಭ್ರಷ್ಟಾಚಾರ ವಿರೋಧಿ ಹೋರಾಟದಿಂದ ರಾಜಕೀಯ ನೆಲೆ ಕಂಡುಕೊಂಡ ಅರವಿಂದ್ ಕೇಜ್ರಿವಾಲ್, ದೇಶದ ಇನ್ನಿತರ ರಾಷ್ಟ್ರೀಯ ಮತ್ತು ಪ್ರಾದೇಶಿಕ ಪಕ್ಷಗಳ ತಂತ್ರಗಾರಿಕೆಯನ್ನೇ ಮೈಗೂಡಿಸಿಕೊಂಡು ನಿಪುಣ ರಾಜಕಾರಣಿಯಾಗಿ ಹೊರಹೊಮ್ಮಿದ್ದಾರೆ.

ದೆಹಲಿಯಲ್ಲಿ ದಶಕಗಳ ಹಿಂದೆ ಅರವಿಂದ್ ಕೇಜ್ರಿವಾಲ್ ನೇತೃತ್ವದಲ್ಲಿ ಆಮ್ ಆದ್ಮಿ ಪಾರ್ಟಿ ಸರ್ಕಾರ ರಚನೆಯಾದಾಗ ಇಡೀ ದೇಶದ ಗಮನ ಸೆಳೆದಿತ್ತು. ಜನರ ನಿರೀಕ್ಷೆಯನ್ನು ಮೀರಿ ಉತ್ತಮ ಆಡಳಿತ ನೀಡುವಲ್ಲಿ ಆಮ್ ಆದ್ಮಿ ಪಾರ್ಟಿ ಯಶಸ್ವಿಯಾಯಿತು.

ಇವತ್ತಿಗೂ ಕೇಜ್ರಿವಾಲ್ ಸಾರಥ್ಯದ ಆಮ್ ಆದ್ಮಿ ಪಾರ್ಟಿ ಉತ್ತಮ ಆಡಳಿತವನ್ನೇ ನೀಡಿದೆ. ಆದರೆ ಈಗ ಮತ್ತೆ ಅನೇಕ ಭ್ರಷ್ಟಾಚಾರದ ಆರೋಪಗಳು ಕೇಳಿ ಬಂದ ಹಿನ್ನೆಲೆಯಲ್ಲಿ ಪಕ್ಷದ ವರ್ಚಸ್ಸು ಕಡಿಮೆಯಾಗುತ್ತಾ ಸಾಗಿದೆ.

ಅದರಲ್ಲೂ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಜೈಲು ಪಾಲಾಗಿದ್ದು ಆಮ್ ಆದ್ಮಿ ಪಾರ್ಟಿಗೆ ಬಹುದೊಡ್ಡ ಆಘಾತ ನೀಡಿತು. ಅರವಿಂದ್ ಕೇಜ್ರಿವಾಲ್ ಅಬಕಾರಿ ನೀತಿ ಪ್ರಕರಣದಲ್ಲಿ ಪ್ರಾಮಾಣಿಕರಾಗಿದ್ದರೆ, ಬಂಧನವಾದ ದಿನವೇ ರಾಜೀನಾಮೆ ಕೊಡಬೇಕಿತ್ತು. ಅಧಿಕಾರಕ್ಕೆ ಅಂಟಿಕೊಂಡ ಅರವಿಂದ್ ಕೇಜ್ರಿವಾಲ್ ಯಾವುದೇ ಕಾರಣಕ್ಕೂ ತಮ್ಮ ಸ್ಥಾನವನ್ನು ಬಿಟ್ಟು ಕೊಡಲಿಲ್ಲ.

ಆರು ತಿಂಗಳ ಸೆರಾವಾಸ ನಂತರ ಜಾಮೀನಿನ ಮೇಲೆ ಹೊರಬಂದ ಕೇಜ್ರಿವಾಲ್, ಅಧಿಕಾರದಲ್ಲಿದ್ದು ಜಾಮೀನಿನ ಷರತ್ತುಗಳನ್ನ ಪಾಲನೆ ಮಾಡುವುದು ಕಷ್ಟ ಎನ್ನುವುದನ್ನು ಅರಿತು, ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡುವ ನಿರ್ಧಾರ ಮಾಡಿದ್ದಾರೆ.

ಷರತ್ತು ಬದ್ಧ ಜಾಮೀನು ಉಳಿಸಿಕೊಳ್ಳುವುದರಲ್ಲಿಯೂ ರಾಜಕೀಯ ತಂತ್ರಗಾರಿಕೆ ಹೆಣದ ಅರವಿಂದ್ ಕೇಜ್ರಿವಾಲ್, ಮುಂದಿನ ಆರು ತಿಂಗಳಲ್ಲಿ ಮತ್ತೆ ಅಧಿಕಾರಕ್ಕೆ ಬರುವ ಕನಸು ಕಾಣುತ್ತಿದ್ದಾರೆ. ಆದರೆ ಈ ಬಾರಿ ದೆಹಲಿ ಗದ್ದುಗೆ ಏರುವುದು ಅಷ್ಟು ಸುಲಭದ ಮಾತಲ್ಲ.

---

**ಸೋಮೇಶ್ವರ ಲಕ್ಷ ದೀಪೋತ್ಸವ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಜಿ.ಎಸ್. ಗಡ್ಡದೇವರಮಠ**

# ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸೋಣ





■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಸೇರಿ ಸುತ್ತಲಿನ ಪ್ರದೇಶಗಳ ಎಲ್ಲರೂ ಜಾತಿ, ಮತ, ಧರ್ಮ, ಪಕ್ಷ ಬೇಧ-ಭಾವ ಮರೆತು ಸಹಾಯ-ಸಹಕಾರ, ಸ್ವಯಂ ಪ್ರೇರಣೆಯೊಂದಿಗೆ ನಮ್ಮ ಪುಲಿಗೆರೆಯ ಆರಾಧ್ಯ ದೈವ ಶ್ರೀ ಸೋಮೇಶ್ವರ ದೇವಸ್ಥಾನದ ಲಕ್ಷ ದೀಪೋತ್ಸವ ಕಾರ್ಯಕ್ರಮ ಯಶಸ್ವಿಗೊಳಿಸೋಣ ಎಂದು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಹೇಳಿದರು.

5 ವರ್ಷಕ್ಕೊಮ್ಮೆ ಸೋಮೇಶ್ವರ ದೇವಸ್ಥಾನದಲ್ಲಿ ನಡೆಸುತ್ತಿರುವ ಲಕ್ಷ ದೀಪೋತ್ಸವ ಕಾರ್ಯಕ್ರಮದ ಕುರಿತು ಚರ್ಚಿಸಲು ಕರೆದಿದ್ದ ಭಕ್ತರ ಸಭೆಯಲ್ಲಿ ಅವರು ಮಾತನಾಡಿದರು.

ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನವನ್ನು ಇನ್ಫೋಸಿಸ್‌ನ ಒಡತಿ ಸುಧಾ ಮೂರ್ತಿಯವರು ತಮ್ಮ ಪ್ರತಿಷ್ಠಾನದಿಂದ 4.5 ಕೋಟಿ ರೂ ವೆಚ್ಚದಲ್ಲಿ ಜೀರ್ಣೋದ್ಧಾರಗೊಳಿಸಿದ ನಂತರ ಪ್ರತಿವರ್ಷ ಪುಲಿಗೆರೆ ಉತ್ಸವ ಮಾಡುತ್ತಿದ್ದಾರೆ. ಇದಕ್ಕೆ ಪೂರಕವೆಂಬಂತೆ 2015ರಿಂದ 5 ವರ್ಷಕ್ಕೊಮ್ಮೆ ಕಾರ್ತಿಕ ಮಾಸದ 3ನೇ ಸೋಮವಾರ ದೇವಸ್ಥಾನದ ವಿವಿಧ ಕಮಿಟಿಗಳ ಸಹಯೋಗದಲ್ಲಿ ಲಕ್ಷ ದೀಪೋತ್ಸವ ಸಮಾರಂಭ ನಡೆಸುತ್ತಾ ಬರಲಾಗಿದೆ. ಈ ವರ್ಷ ನ.18ರಂದು ವಿಶೇಷವಾಗಿ ಲಕ್ಷ ದೀಪೋತ್ಸವ ಆಚರಿಸಲು ಭಕ್ತ ಸಮೂಹ ನಿರ್ಧರಿಸಿದೆ.

ಧರ್ಮಸ್ಥಳದ ಶ್ರೀ ವಿರೇಂದ್ರ ಹೆಗ್ಗಡೆ, ಪೇಜಾವರ, ಕನೇರಿ, ಕೊಪ್ಪಳ, ಉಡುಪಿ ಶ್ರೀಗಳಿಗೆ ಪಾವನ ಸಾನ್ನಿಧ್ಯ ವಹಿಸಲು ಕೋರಲಾಗಿದೆ. ಡಾ. ಸುಧಾ ನಾರಾಯಣ ಮೂರ್ತಿ ಅವರೂ ಸೇರಿ ಅನೇಕ ಗಣ್ಯಮಾನ್ಯರು, ಜನಪ್ರತಿನಿಧಿಗಳಿಗೆ ಆಹ್ವಾನ ನೀಡಲಾಗುವುದು. ಲಕ್ಷ ದೀಪೋತ್ಸವ ಕಾರ್ಯಕ್ರಮ ಯಶಸ್ವಿಗೊಳಿಸಲು ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸೋಣ ಎಂದರು.

> ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಭಕ್ತರು ಮನಸ್ಸು ಮಾಡಿದರೆ ಏನೆಲ್ಲ ಕಾರ್ಯ ಮಾಡಲು ಸಾಧ್ಯ. ಈಗಾಗಲೇ ಲಕ್ಷ್ಮೇಶ್ವರದಲ್ಲಿ ದಸರಾ ದರ್ಬಾರ್ ಸೇರಿ ಅನೇಕ ದೊಡ್ಡ ಸಮಾರಂಭಗಳನ್ನು ಮಾದರಿಯಾಗುವಂತೆ ಮಾಡಲಾಗಿದೆ. ಸೋಮೇಶ್ವರ ದೇವಸ್ಥಾನ ಈ ನಾಡಿನ ಎಲ್ಲ ವರ್ಗದ ಜನರ ಶ್ರದ್ಧಾ ಭಕ್ತಿಯ ಪರಮ ಪವಿತ್ರ ಸನ್ನಿಧಿಯಾಗಿದೆ. ದೇವಸ್ಥಾನದ ಅಭಿವೃದ್ಧಿ, ನಡೆಯುವ ಧಾರ್ಮಿಕ ಕಾರ್ಯಕ್ರಮಗಳಿಗೆ ಜಾತಿ, ಧರ್ಮ, ರಾಜಕಾರಣ ಬೆರೆಸುವುದು ಬೇಡ. ಕೊಡುವ ಕೈಗಳು ಸಾಕಷ್ಟಿವೆ. ಅದಕ್ಕಾಗಿ ಮನೆಮನೆಗೆ ದೇಣಿಗೆ ಸಂಗ್ರಹ ಬೇಡ. ಎಲ್ಲರೂ ಶ್ರದ್ಧಾ-ಭಕ್ತಿಯಿಂದ ಪಾಲ್ಗೊಂಡರೆ ಕಾರ್ಯಕ್ರಮ ಯಶಸ್ವಿಯಾಗುತ್ತದೆ ಎಂದರು.

ಸಭೆಯಲ್ಲಿ ಭಕ್ತರ ಕಮಿಟಿಯ ಕಜಾಂಚಿ ಚನ್ನಪ್ಪ ಜಗಲಿ, ಕಾರ್ಯಕ್ರಮ ಯಶಸ್ಸಿಗಾಗಿ ಸ್ವಾಗತ, ಪ್ರಸಾದ, ಪ್ರಚಾರ, ಹಣಕಾಸು, ವೇದಿಕೆ ಸೇರಿ ವಿವಿಧ ಸಮಿತಿಗಳ ರಚನೆಯನ್ನು ಸೂಚಿಸಿದರು. ಮಾಜಿ ಶಾಸಕ ರಾಮಣ್ಣ ಲಮಾಣಿ ಮಾತನಾಡಿ, ದೇವಸ್ಥಾನದಲ್ಲಿ ನಡೆಯುವ ಎಲ್ಲ ಕಾರ್ಯಗಳಿಗೆ ಹಿಂದಿನಂತೆ ಸಂಪೂರ್ಣ ಸಹಾಯ-ಸಹಕಾರ ನೀಡುವುದಾಗಿ ಹೇಳಿದರು. ಕಾರ್ಯಕ್ರಮದ ಯಶಸ್ವಿಗಾಗಿ ಕೈಗೊಳ್ಳಬೇಕಾದ ಎಲ್ಲ ರೂಪುರೇಷೆಗಳ ಬಗ್ಗೆ ವಿವರವಾದ ಚರ್ಚೆ ಜರುಗಿ, ಅನೇಕ ಭಕ್ತರು ತಮ್ಮ ಸಲಹೆ-ಸೂಚನೆಗಳನ್ನು ನೀಡಿದರು.

ಸಭೆಯ ಅಧ್ಯಕ್ಷತೆಯನ್ನು ಶ್ರೀ ಸೋಮೇಶ್ವರ ದೇವಸ್ಥಾನ ಭಕ್ತರ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ವಹಿಸಿದ್ದರು. ಸಭೆಯಲ್ಲಿ ವಿ.ಎಲ್. ಪೂಜಾರ, ಎಸ್.ಪಿ. ಪಾಟೀಲ, ಬಸವೇಶ ಮಹಾಂತ ಶೆಟ್ಟರ, ಬಸಣ್ಣ ಬೆಂಡಿಗೇರಿ, ನೀಲಪ್ಪ ಕರ್ಜೆಕಣ್ಣವರ, ಸೋಮಣ್ಣ ಉಪನಾಳ, ಸಿದ್ದನಗೌಡ ಬಳ್ಳೊಳ್ಳಿ, ಶಿವಯೋಗಿ ಅಂಕಲಕೋಟಿ, ಯಲ್ಲಪ್ಪಗೌಡ ಉದ್ದನಗೌಡರ, ಸುಭಾಷ ಓದುನವರ, ಶಂಕ್ರಣ್ಣ ಬಾಳಿಕಾಯಿ, ಮಹೇಶ ಹೊಗೆಸೊಪ್ಪಿನ, ಕೆ.ಎಸ್. ಕುಲಕರ್ಣಿ, ಸಿ.ಜಿ. ಹಿರೇಮಠ, ಸುರೇಶ ರಾಚನಾಯ್ಕರ, ರಾಘವೇಂದ್ರ ಪೂಜಾರ, ಬಂಗಾರಪ್ಪ ಮುಳಗುಂದ, ಬಸವಣ್ಣೆಪ್ಪ ನಂದೆಣ್ಣನವರ, ಸಿ.ಆರ್. ಲಕ್ಕುಂಡಿಮಠ, ಈರಣ್ಣ ಮುಳಗುಂದ, ಚಂದ್ರಗೌಡ ಪಾಟೀಲ, ಕಿರಣ ನವಲೆ, ಶಿವಾನಂದ ಲಿಂಗಶೆಟ್ಟಿ, ನಾಗರಾಜ ಕಳಸಾಪುರ, ಸೋಮಶೇಖರ ಕೆರಿಮನಿ, ವಿರೂಪಾಕ್ಷ ಆದಿ, ಮಯೂರ ಪಾಟೀಲ, ಬಸವರಾಜ ಮೆಣಸಿನಕಾಯಿ ಮತ್ತಿತರಿದ್ದರು. ಜಿ.ಎಸ್. ಗುಡಗೇರಿ, ಈಶ್ವರ ಮೇಡ್ಲೇರಿ ನಿರ್ವಹಿಸಿದರು.

---

# ರಸ್ತೆ ಸರಿಪಡಿಸಿದ ಕಿನ್ನಾಳ ಗ್ರಾಮದ ಯುವಕರ ಕಾರ್ಯಕ್ಕೆ ನ್ಯಾಯಾಧೀಶರ ಮೆಚ್ಚುಗೆ




■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಗಣೇಶ ಉತ್ಸವ-2024ರ ಸಮಯದಲ್ಲಿ ಸಂಗ್ರಹಿಸಿದ ಹಣದಿಂದ ತಮ್ಮೂರ ರಸ್ತೆ ಸರಿಪಡಿಸಿದ ತಾಲೂಕಿನ ಕಿನ್ನಾಳ ಗ್ರಾಮದ ಯುವಕರ ನಡೆಗೆ ಗೌರವಾನ್ವಿತ ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಚಂದ್ರಶೇಖರ್ ವಿಶೇಷ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಗಣೇಶ ಉತ್ಸವದ ಸಮಯದಲ್ಲಿ ಹಣ ಸಂಗ್ರಹಿಸಿದ ಯುವಕರು ಗಣೇಶ ಉತ್ಸವಕ್ಕೆ ಕಡಿಮೆ ಪ್ರಮಾಣದಲ್ಲಿ ಹಣ ಬಳಸಿ ಉಳಿದ ಹಣ ರಸ್ತೆಗೆ ಬಳಸಿದ ಬಗ್ಗೆ ಪತ್ರಿಕೆಗಳಲ್ಲಿ ವಿಶೇಷ ವರದಿಯಾಗಿತ್ತು. ಇದನ್ನು ಗಮನಿಸಿದ ನ್ಯಾಯಾಧೀಶ ಚಂದ್ರಶೇಖರ್ ಸಿ ಇನ್ನಿತರ ನ್ಯಾಯಾಧೀಶರು ಹಾಗೂ ಕೋರ್ಟ್ ಸಿಬ್ಬಂದಿ ವರ್ಗದವರ ಸಮ್ಮುಖದಲ್ಲಿ ಸೆ.14ರಂದು ಚಹಾ ಕೂಟ ಏರ್ಪಡಿಸಿ ಯುವಕರಿಗೆ ಅಭಿನಂದನೆ ತಿಳಿಸಿದರು.

ನಿಮ್ಮ ಕಾಳಜಿ ಇತರರಿಗೆ ಮಾದರಿ: ಇಂದಿನ ಬಹುತೇಕ ಯುವಕರು ಹಲವಾರು ವ್ಯಸನಗಳಿಗೆ ಬಲಿಯಾಗಿ ಜೀವ ಕಳೆದುಕೊಳ್ಳುತ್ತಿದ್ದಾರೆ. ಓದು, ಅಧ್ಯಯನ ಕಡಿಮೆ ಆಗಿದೆ. ಬಹಳಷ್ಟು ಯುವಕರು ಯಾವುದೇ ಆದರ್ಶ, ಮೌಲ್ಯಗಳನ್ನು ಇಟ್ಟುಕೊಳ್ಳದೇ ದಿನಗಳೆಯುತ್ತಾರೆ. ನಾವು ಸರಿ ಇದ್ರೆ ಸಾಕು. ಊರ ಬಗ್ಗೆ ಯಾಕೆ ತಲೆ ಕೆಡಿಸಿಕೊಳ್ಳಬೇಕು ಎಂದೇ ಬಹಳಷ್ಟು ಜನ ಆಲೋಚಿಸುತ್ತಾರೆ. ಇಂತಹ ಸಂದರ್ಭದಲ್ಲಿ ನೀವು ಗ್ರಾಮದ ಬಗ್ಗೆ ವಿಶೇಷ ಕಾಳಜಿ ವಹಿಸಿ, ನಮ್ಮ ಗ್ರಾಮಕ್ಕೆ ಸುಸಜ್ಜಿತ ರಸ್ತೆಯಾದಲ್ಲಿ ಅನುಕೂಲವಾಗಲಿದೆ ಎಂದು ಯೋಚಿಸಿ, ಉತ್ತಮ ಯೋಚನೆ, ನಿರ್ಧಾರಕ್ಕೆ ಎಲ್ಲರೂ ಬದ್ಧರಾಗಿ ಗಣೇಶ ಉತ್ಸವಕ್ಕೆ ಸಂಗ್ರಹಿಸಿದ ಹಣದಿಂದ ಗ್ರಾಮದ ರಸ್ತೆ ಮಾಡಿದ ಕಾರ್ಯವು ಅತ್ಯಂತ ಮಾದರಿಯಾದುದಾಗಿದೆ. ನಿಮ್ಮ ಕಾರ್ಯವು ಶ್ಲಾಘನೀಯವಾಗಿದೆ. ನಿಮ್ಮ ಕಾರ್ಯವು ಜಿಲ್ಲೆಯ ಇನ್ನಿತರ ಗ್ರಾಮಗಳ, ರಾಜ್ಯದ, ದೇಶದ ಯುವಕರಿಗೆ ಮಾದರಿಯಾಗಿದೆ ಎಂದು ನ್ಯಾ. ಚಂದ್ರಶೇಖರ ಸಿ ಅವರು ಕೊಪ್ಪಳ ಜಿಲ್ಲೆಯ ಕಿನ್ನಾಳ ಗ್ರಾಮದ ಯುವಕರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಯುವಕರಿಂದ ಅಭಿನಂದನೆ: ನಮ್ಮ ಕಾರ್ಯದ ಬಗ್ಗೆ ಪತ್ರಿಕೆಗಳಲ್ಲಿ ಮತ್ತು ಸುದ್ದಿ ವಾಹಿನಿಗಳಲ್ಲಿ ಸುದ್ದಿಯಾದಾಗ ನಮಗೆ ಸಾಕಷ್ಟು ಖುಷಿಯಾಯಿತು. ಯುವಜನರು ಒಗ್ಗೂಡಿದಲ್ಲಿ ಇಂತಹ ಹತ್ತಾರು ಕಾರ್ಯಗಳನ್ನು ಮಾಡಬಹುದಾಗಿದೆ ಎನ್ನುವಂತಹ ಪ್ರೇರಣೆ ನಮಗೆ ಸಿಕ್ಕಿದೆ. ವಿಶೇಷವಾಗಿ ಕೊಪ್ಪಳ ಜಿಲ್ಲೆಯ ಜಿಲ್ಲಾ ನ್ಯಾಯಾಧೀಶರು ನಮ್ಮ ಕಾರ್ಯವನ್ನು ಗುರುತಿಸಿ, ಖುದ್ದು ಜಿಲ್ಲಾ ನ್ಯಾಯಾಲಯಕ್ಕೆ ಆಹ್ವಾನ ನೀಡಿ ನ್ಯಾಯಾಧೀಶರ ಸಮ್ಮುಖದಲ್ಲಿ ಕೂಡಿಸಿ ನಮಗೆ ಆತಿಥ್ಯ ಮಾಡಿದ್ದು, ಮತ್ತಷ್ಟು ಹೊಸ ಹೊಸ ಕಾರ್ಯ ಮಾಡಲು ನಮಗೆ ವಿಶೇಷ ಸ್ಫೂರ್ತಿ ಸಿಕ್ಕಂತಾಗಿದೆ ಎಂದು ಯುವಕರು, ಗೌರವಾನ್ವಿತ ಜಿಲ್ಲಾ ನ್ಯಾಯಾಧೀಶರಾದ ಚಂದ್ರಶೇಖರ ಸಿ ಅವರಿಗೆ ಅಭಿನಂದನೆ ತಿಳಿಸಿದರು.

---

# ಭಾವೈಕ್ಯತೆಯ ಹಬ್ಬ ಈದ್ ಮಿಲಾದ್



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸೋಮವಾರ ಪಟ್ಟಣದಲ್ಲಿ ಸಾವಿರಾರು ಮುಸ್ಲಿಂ ಬಾಂಧವರು ಸೇರಿ ಈದ್ ಮಿಲಾದ್ ಹಬ್ಬವನ್ನು ಆಚರಿಸಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು. ಪುರಸಭೆ ಹತ್ತಿರ ಮೆರವಣಿಗೆ ಬಂದಾಗ ಬಳ್ಳಾರಿ ಮೊಹಲ್ಲಾ ಜಮಾತ್‌ದ ನೂರಾರು ಕಾರ್ಯಕರ್ತರು ಮೆರವಣಿಗೆಯಲ್ಲಿ ಪಾಲ್ಗೊಂಡವರಿಗೆ ಹಾಗೂ ಸಾರ್ವಜನಿಕರಿಗೆ ಹಣ್ಣು, ಸಿಹಿ ಮತ್ತು ಕುಡಿಯಲು ನೀರಿನ ಬಾಟಲಿಗಳನ್ನು ವಿತರಿಸಿದರು.

ದಾರಿಯುದ್ದಕ್ಕೂ ಬಾಳೆಹಣ್ಣು, ಶರಬತ್ ಇತ್ಯಾದಿಗಳನ್ನು ಸಮಾಜದ ಅನೇಕರು ವಿತರಿಸಿದ್ದು ಗಮನ ಸೆಳೆಯಿತು. ಈ ವೇಳೆ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ, ಗುರುನಾಥ ದಾನಪ್ಪನವರ, ವಿ.ಜಿ. ಪಡಗೇರಿ, ಮಹೇಶ ಹೊಗೆಸೊಪ್ಪಿನ, ರಾಜಣ್ಣ ಕುಂಬಿ, ಪದ್ಮರಾಜ ಪಾಟೀಲ, ಸೋಮಣ್ಣ ಬೆಟಗೇರಿ, ರಾಜರತ್ನ ಹುಲಗೂರ, ಹರೀಶ ಲಕ್ಷ್ಮೇಶ್ವರ, ರಾಮಣ್ಣ ರಿತ್ತಿ, ಬಸವಣ್ಣೆಪ್ಪ ನಂದೆಣ್ಣವರ, ಕಿರಣ ನವಲೆ, ಬಸವರಾಜ ಹಿರೇಮನಿ ಸೇರಿದಂತೆ ಅನೇಕ ಮುಖಂಡರು ಆಗಮಿಸಿ ಜಮಾತ್‌ದ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಬಳ್ಳಾರಿ ಮೊಹಲ್ಲಾ ಜಮಾತ್‌ದ ಅಧ್ಯಕ್ಷ ಮಾಬೂಸಾಬ ಹೆಸರೂರ, ನಿಸಾರಅಹ್ಮದ ರಿತ್ತಿ, ಮುನಾಫಸಾಬ್ ರತನಖಾನ, ಮದಾರಸಾಬ ಹೆಸರೂರು, ಅಬ್ದುಲ್ ರಿತ್ತಿ, ಜಿಲಾನಿ ಹಣಗಿಕಟ್ಟಿ, ದಾದಾಪೀರ ಬಂಕಾಪೂರ, ದುದ್ದು ರತನಖಾನ್, ಮುನ್ನಾ ಕಮತಗಿ, ನೂರಅಹ್ಮದ ಕಮತಗಿ, ಅಜೀಜ್ ಹೆಸರೂರ, ನಜೀರಸಾಬ ರಿತ್ತಿ, ಇಮ್ರಾನ್ ಹೆಸರೂರ, ಹಜರೆಸಾಬ ನಧಾಫ್ ಸೇರಿದಂತೆ ಅನೇಕರಿದ್ದರು.

---

# ಸಂಭ್ರಮದ ಈದ್ ಮಿಲಾದ್ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪ್ರವಾದಿ ಮುಹಮ್ಮದ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ಸೋಮವಾರ ಈದ್ ಮಿಲಾದ್ ಹಬ್ಬವನ್ನು ಪಟ್ಟಣವೂ ಸೇರಿದಂತೆ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿ ಸಡಗರ ಸಂಭ್ರಮದಿಂದ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ವಿವಿಧ ಸ್ಥಳಗಳಲ್ಲಿಯ ಮುಸ್ಲಿಂ ಬಾಂಧವರು ಪರಸ್ಪರ ಈದ್ ಶುಭಾಶಯ ಕೋರಿದರು. ಆಸಾರ ಓಣಿ, ಮಕಾನಗಲ್ಲಿ, ತಳಗೇರಿ ಓಣಿ, ಮೇಗೇರಿ ಓಣಿ, ಇಂಗಲಾಪೂರ ಇತ್ಯಾದಿ ಪ್ರದೇಶಗಳು ಹಸಿರು ಬಾವುಟ, ತೋರಣಗಳಿಂದ ಶೃಂಗರಿಸಲ್ಪಟ್ಟಿದ್ದವು. ಪ್ರಮುಖ ವೃತಗಳಲ್ಲಿ ಹಬ್ಬಕ್ಕೆ ಶುಭಾಶಯ ಕೋರುವ ಬ್ಯಾನರಗಳು ರಾರಾಜಿಸುತ್ತಿದ್ದವು.

ನಂತರ ಹಜರತ್ ಹಬೂಬ ಸುಬ್ಹಾನಿ ದರ್ಗಾದಿಂದ ಮೆರವಣಿಗೆಯು ಪ್ರಾರಂಭವಾಗಿ ಪ್ರಮುಖ ವೃತ್ತಗಳಲ್ಲಿ ಸಂಚರಿಸಿತು. ಸಮಾಜದ ಹಿರಿಯರು, ಯುವಕರು, ಚಿಕ್ಕ ಮಕ್ಕಳು ಸೇರಿದಂತೆ ಸಾವಿರಾರು ಜನರು ಅತ್ಯಂತ ಉತ್ಸಾಹದಿಂದ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

---

## ವಿಜಯೇಂದ್ರ ಓರ್ವ ಭ್ರಷ್ಟ, ಅವನು ನಮ್ಮ ನಾಯಕ ಅಲ್ಲ: ಏಕವಚನದಲ್ಲೇ ರಮೇಶ್ ಜಾರಕಿಹೊಳಿ ಕಿಡಿ!



■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ವಿಜಯೇಂದ್ರ ಓರ್ವ ಭ್ರಷ್ಟ, ಅವನು ನಮ್ಮ ನಾಯಕ ಅಲ್ಲ ಎಂದು ಹೇಳುವ ಮೂಲಕ ಏಕವಚನದಲ್ಲೇ ಬಿಜೆಪಿ ರಾಜ್ಯಾಧ್ಯಕ್ಷರ ವಿರುದ್ಧ ರಮೇಶ್ ಜಾರಕಿಹೊಳಿ ಕಿಡಿಕಾರಿದರು.

ವಿಜಯೇಂದ್ರ ರಾಜ್ಯಾಧ್ಯಕ್ಷ ಎಂದು ನಾನು ಒಪ್ಪೋದಿಲ್ಲ. ಮುಂದಿನ ಅಧ್ಯಕ್ಷ ಯಾರು ಎಂಬುದು ಪಕ್ಷದ ವರಿಷ್ಠರು ತೀರ್ಮಾನ ಮಾಡಬೇಕು. ವಿಜಯೇಂದ್ರ ಬಿಜೆಪಿ ಪಕ್ಷದಲ್ಲಿ ಇನ್ನೂ ಜೂನಿಯರ್, ಅವನಿಗೆ ಯಾವುದೇ ಐಡಿಯಾಲಜಿ ಇಲ್ಲ. ಬಿಜೆಪಿಯ ಭ್ರಷ್ಟ ಎಂಬ ಲೇಬಲ್ ವಿಜಯೇಂದ್ರ ಮೇಲಿದೆ ಎಂದು ರಮೇಶ್ ಜಾರಕಿಹೊಳಿ ಹರಿಹಾಯ್ದರು.

ವಿಜಯೇಂದ್ರ ಅಧ್ಯಕ್ಷ ಆಗಿದ್ದಕ್ಕೆ ನನ್ನ ವಿರೋಧವಿದೆ. ಹಾಗಂತ ನಾನೆಂದೂ ಯಡಿಯೂರಪ್ಪನವರಿಗೆ ವಿರೋಧಿ ಅಲ್ಲ. ಯಡಿಯೂರಪ್ಪ ನಮ್ಮ ಪಕ್ಷಕ್ಕೆ ಪ್ರಶ್ನಾತೀತ ನಾಯಕ. ಯಡಿಯೂರಪ್ಪರ ಬಗ್ಗೆ ನಮಗೆ ತುಂಬಾ ಗೌರವವಿದೆ. ಆದರೆ, ವಿಜಯೇಂದ್ರ ನಮ್ಮ ಪಕ್ಷದ ನಾಯಕನಲ್ಲ ಎಂದು ಆಕ್ರೋಶ ಹೊರಹಾಕಿದ್ದಾರೆ.

ಆರ್ ಎಸ್ ಎಸ್ ಪ್ರಮುಖ ನಾಯಕರು, ಬಿಜೆಪಿ ನಾಯಕರ ಸಭೆಯ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ರಮೇಶ್ ಜಾರಕಿಹೊಳಿ, ಸಭೆಯಲ್ಲಿ ಏನು ಚರ್ಚೆಯಾಯಿತು ಎಂದು ಹೇಳುವುದಕ್ಕೆ ಆಗುವುದಿಲ್ಲ. ತಪ್ಪು ಮಾಡಿದವರನ್ನು ಸಭೆಯಲ್ಲಿ ಮುಖಂಡರು ಬೈದಿದ್ದಾರೆ ಅಷ್ಟೇ ಎಂದರು.

---

**ಲಕ್ಷ, ಲಕ್ಷ ಕೊಟ್ಟು ಕತ್ತೆ ಖರೀದಿಗೆ ಮುಂದಾದ ರೈತರು!**

## ಜನ ಮರಳೋ, ಜಾತ್ರೆ ಮರಳೋ

■ ವಿಜಯಸಾಕ್ಷಿ ಸುದ್ದಿ, ವಿಜಯನಗರ

ವಿಜಯನಗರದಲ್ಲಿ ಜನ ಮರಳೋ, ಜಾತ್ರೆ ಮರಳೋ ಎಂಬ ಪ್ರಶ್ನೆ ಎದ್ದಿದ್ದು, ಲಕ್ಷ, ಲಕ್ಷ ರೂ. ಕೊಟ್ಟು ಕತ್ತೆ ಖರೀದಿಯಲ್ಲಿ ರೈತರು ನಿರತರಾಗಿದ್ದಾರೆ. ಕತ್ತೆ ಹಾಲಿನ ಲಾಭ ನೋಡಿ ರೈತರು ಕತ್ತೆಗಳ ಖರೀದಿಗೆ ಮುಂದಾಗಿದ್ದಾರೆ. ತಿಂಗಳಿಗೆ 60 ರಿಂದ 70 ಸಾವಿರ ಲಾಭ ಪಡೆಯಬಹುದು ಎಂದು ರೈತರು ಹೇಳುತ್ತಿದ್ದು, ಹೀಗಾಗಿ ಕತ್ತೆಗಳ ಖರೀದಿ ಜೋರಾಗಿದೆ. ಜನ್ನಿ ಮಿಲ್ಕ್ ಕಂಪನಿಯಿಂದ ಕತ್ತೆಗಳ ಮಾರಾಟ ಆಗುತ್ತಿರುವುದು ತಿಳಿದು ಬಂದಿದೆ. ಜನ್ನಿ ಮಿಲ್ಕ್ ಕಂಪನಿಯ ರಾಜ್ಯದ ಏಕೈಕ ಕಚೇರಿ ಹೊಸಪೇಟೆಯಲ್ಲಿ ಹೊಂದಿದ್ದು, ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯಲ್ಲಿ ಮೂಲ ಕಚೇರಿ ಹೊಂದಿದೆ.

ಸಧ್ಯ ವಿಜಯನಗರದ ಜಿಲ್ಲೆಯಾದ್ಯಾಂದ ಕತ್ತೆಗಳ ಖರೀದಿ ಭರಾಟೆ ಸಖತ್ ಸದ್ದು ಮಾಡ್ತಿದೆ. ಅತ್ತೆಗೊಂದು ಕಾಲ, ಸೊಸೆಗೊಂದು ಕಾಲ ಅನ್ನೋ ಮಾತಿತ್ತು. ಕಾರ್ಯವಾಸಿ ಕತ್ತೆ ಕಾಲು ಹಿಡಿಯೋದು ಅನ್ನೋ ಗಾದೆಯಂತೆ , ಈಗ ಕತ್ತೆಗೂ ಕಾಲ ಬಂದಿದೆ.

3 ಲಕ್ಷ ಕೊಟ್ರೆ ಮೂರು ಕತ್ತೆಗಳು ಮತ್ತು ಮೂರು ಮರಿ ಕತ್ತೆಯನ್ನು ಕಂಪನಿ ಕೊಡ್ತಿದೆ. 500 ರೂ. ಬಾಂಡ್ ಮೇಲೆ ಅಗ್ರಿಮೆಂಟ್ ಮಾಡಿಸಿಕೊಂಡು 3 ಲಕ್ಷಕ್ಕೆ ಮೂರು ಕತ್ತೆಗಳು, 3 ಮರಿ ಕತ್ತೆಗಳನ್ನು ರೈತರಿಗೆ ಕಂಪನಿ ಮಾರಾಟ ಮಾಡುತ್ತಿದೆ. ಇನ್ನೂ ಈ ಕತ್ತೆಗಳ ಹಾಲಿಗೆ ಭಾರಿ ಡಿಮ್ಯಾಂಡ್ ಇದ್ದು, ಒಂದು ಕತ್ತೆ ಒಂದು ದಿನಕ್ಕೆ ಎರಡು ಲೀಟರ್ ಹಾಲು ಕೊಡುತ್ತದೆ. ಅದರಲ್ಲಿ 1 ಲೀಟರ್ ಗೆ 2736 ರೂ ಇದ್ದು, ತಿಂಗಳಿಗೆ 60-70 ಸಾವಿರ ರೂಪಾಯಿ ಲಾಭ ಮಾಡಬಹುದು ಅನ್ನೋ ಪ್ಲ್ಯಾನ್ ರೈತರದ್ದಾಗಿದೆ.

---

# ಸಮರ್ಪಕವಾಗಿ ಕುಡಿಯುವ ನೀರು ಪೂರೈಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆಯಲ್ಲಿ ಅಧಿಕಾರಿಗಳ ಬೇಜಾವಾಬ್ದಾರಿ, ನಿರ್ಲಕ್ಷ್ಯ, ದುರಸ್ಥಿ ಖರ್ಚು-ವೆಚ್ಚದ ಬಗ್ಗೆ ಅನುಮಾನ ಮೂಡಿದೆ. ಇದಕ್ಕೆ ಜಿಲ್ಲಾ ಯೋಜನಾ ನಿರ್ದೇಶಕರು, ಪುರಸಭೆಯ ಮುಖ್ಯಾಧಿಕಾರಿ ಮತ್ತು ತಾಂತ್ರಿಕ ವಿಭಾಗ ಇಂಜಿನಿಯರುಗಳೇ ಕಾರಣರಾಗಿದ್ದು, ಇವರನ್ನು ಸೇವೆಯಿಂದ ವಜಾ ಮಾಡಿ ದಕ್ಷ ಅಧಿಕಾರಿಗಳನ್ನು ನೇಮಿಸಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕೆಂದು ಪಟ್ಟಣದ ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪಟ್ಟಣದಲ್ಲಿ ಒಂದು ತಿಂಗಳಿನಿಂದ ನೀರಿನ ಸಮಸ್ಯೆ ಉಂಟಾಗಿದ್ದು, ಪ್ರತಿಭಟನೆ, ಹೋರಾಟ ಸಾಮಾನ್ಯವಾಗಿದೆ. ನದಿ ತುಂಬಿ ಹರಿಯುತ್ತಿದ್ದರೂ ಅಧಿಕಾರಿಗಳ ಬೇಜಾವಾಬ್ದಾರಿಯಿಂದ ಸಮಸ್ಯೆ ಉಂಟಾಗಿದೆ. ಪಟ್ಟಣಕ್ಕೆ ನೀರು ಸರಬರಾಜು ಮಾಡುವ ಮೇವುಂಡಿ ಜಾಕವೆಲ್‌ನ ನೀರೆತ್ತುವ ಮೋಟಾರ ಪಂಪ್ ದುರಸ್ಥಿಯ 18 ಲಕ್ಷ ರೂ ಬಾಕಿ ಉಳಿಸಿಕೊಂಡಿದ್ದಾರೆಂದು ಗುತ್ತಿಗೆದಾರ ದುರಸ್ಥಿಗೆ ಕೊಟ್ಟ ಮೋಟರ್ ರಿಪೇರಿ ಮಾಡಿ ಕೊಟ್ಟಿಲ್ಲ.

ನೀರು ಸರಬರಾಜಿಗಾಗಿ ಅಪಾರ ಪ್ರಮಾಣ ಹಣ ಖರ್ಚು ಮಾಡಿದ್ದರೂ ವರ್ಷದುದ್ದಕ್ಕೂ 20 ದಿನಗಳಿಗೊಮ್ಮೆ ನೀರು ಕೊಡಲಾಗಿದೆ. 1 ತಿಂಗಳಿಂದ ಸಂಪೂರ್ಣ ನೀರು ಸ್ಥಗಿತವಾಗಿದೆ. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಮತ್ತು ಸಮರ್ಪಕ ಕುಡಿಯುವ ನೀರಿಗಾಗಿ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರಾದ ಉಮೇಶ ಹೆಬ್ಬಾಳ, ಬಸವರಾಜ ಗೋಡಿ, ಆರ್.ಎಂ. ಗದಗ, ಬಸವರಾಜ ಅರಳಿ, ಆರ್.ವಿ. ವೆರ್ಣೇಕರ, ಎಂ.ಹೆಚ್. ಬಡಿಗೇರ, ಕೆ.ಆರ್. ಅಳವಂಡಿ, ಆರ್.ಬಿ. ಕುಂಬಾರ, ಎ.ಎಸ್. ಮಿಸ್ಕಿನ್ ಸೇರಿ ಹಲವರು ಸಹಿ ಮಾಡಿದ ಮನವಿ ಪತ್ರವನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದರು.

### ಇನ್ನರ್‌ವ್ಹೀಲ್ ಕ್ಲಬ್ ವತಿಯಿಂದ 51 ಶಿಕ್ಷಕರಿಗೆ 'ನೇಷನ್ ಬಿಲ್ಡರ್ ಅವಾರ್ಡ್'

# ಸಮಾಜದಲ್ಲಿ ಶಿಕ್ಷಕರಿಗೆ ಗೌರವಯುತ ಸ್ಥಾನವಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಆದರ್ಶ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿದೆ. ಮಕ್ಕಳಲ್ಲಿ ಆಂತರಿಕ ಮೌಲ್ಯಗಳನ್ನು ವೃದ್ಧಿಸುವ ಕಾರ್ಯ ಶಿಕ್ಷಕರಿಂದ ನಿರಂತರವಾಗಿ ನಡೆಯುತ್ತಿದೆ. ಶಿಕ್ಷಕರಿಗೆ ಸಮಾಜದಲ್ಲಿ ಗೌರವಯುತ ಸ್ಥಾನವಿದೆ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಹೇಳಿದರು.

ಅವರು ಸೋಮವಾರ ನಗರದ ಉಷಾದೇವಿ ಕುಷ್ಟಗಿ ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿಯಿಂದ ಶಿಕ್ಷಣ ಕ್ಷೇತ್ರದಲ್ಲಿ ನಿರರಂತರ ಸೇವೆ ಸಲ್ಲಿಸುತ್ತಿರುವ ಆಯ್ದ 51 ಶಿಕ್ಷಕ-ಶಿಕ್ಷಕಿಯರಿಗೆ 'ನೇಷನ್ ಬಿಲ್ಡರ್ ಅವಾರ್ಡ್' ಪ್ರದಾನ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡುತ್ತಿದ್ದರು.

ಎಲ್ಲರ ಅನುಭವಗಳು ಒಂದೇ ಆಗಿರುತ್ತದೆ. ಆದರೆ ಸಾಮಾನ್ಯರಿಗಿಂತ ಭಿನ್ನವಾದ ಅಸಮಾನ್ಯವಾದ ಅನುಭವ ಹೊಂದಿರುವವರೇ ನಿಜವಾದ ಸಾಧಕರು. ಇವರು ತಮ್ಮ ಬದುಕಿನ ಅನುಭವಗಳನ್ನು ಸಮಾಜದೊಡನೆ ಹಂಚಿಕೊಂಡು ಮುಂದೆ ಸಾಗುವರು. ಇದಕ್ಕೆ ಶಿಕ್ಷಕರು ಹೊರತಾಗಿಲ್ಲ ಎಂದರು.

ಪಿಡಿಸಿ ಪ್ರೇಮಾ ಗುಳಗೌಡ್ರ ಮಾತನಾಡಿ, ಇನ್ನರ್‌ವ್ಹೀಲ್ ಕ್ಲಬ್ ಅಂತಾರಾಷ್ಟ್ರೀಯ




ಸಂಸ್ಥೆಯಾಗಿದ್ದು, ಸಂಸ್ಥೆಯ ಮಾರ್ಗಸೂಚಿಯನ್ನು ಅನುಸರಿಸಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ನೇಷನ್ ಬಿಲ್ಡರ್ ಅವಾರ್ಡ್ ಶೈಕ್ಷಣಿಕ ಕಾರ್ಯಕ್ಷೇತ್ರದಲ್ಲಿ ಸಾಧನೆ ಮಾಡಿದ ಶಿಕ್ಷಕ ಬಳಗಕ್ಕೆ ನೀಡುವ ಪ್ರಶಸ್ತಿಯಾಗಿದ್ದು, ಇಂದು ಕ್ಲಬ್‌ನಿಂದ 51 ಶಿಕ್ಷಕರನ್ನು ಸನ್ಮಾನಿಸಲಾಗಿದೆ. ಈಗಾಗಲೇ ಸರಕಾರಿ ಶಾಲೆಗಳನ್ನು ಪ್ರತಿ ವರ್ಷ ದತ್ತು ಪಡೆದು ಶಾಲೆಗಳಿಗೆ ಬೇಕಾದ ಶೈಕ್ಷಣಿಕ ಸೌಲಭ್ಯಗಳನ್ನು ಹಾಗೂ ವಿಕಲಚೇತನ, ಬಡಮಕ್ಕಳ, ಶೈಕ್ಷಣಿಕ ಪ್ರಗತಿಗೆ ಸಹಾಯ ನೀಡಲಾಗಿದೆ. ಬರಲಿರುವ ದಿನಗಳಲ್ಲಿ ಇನ್ನಷ್ಟು ಶೈಕ್ಷಣಿಕ ಚಟುವಟಿಕೆಗಳಿಗೆ ಪೂರಕವಾಗಿ ಕ್ಲಬ್ ಕಾರ್ಯ ನಿರ್ವಹಿಸಲಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಲಬ್ ಕಾರ್ಯದರ್ಶಿ ವೀಣಾ ತಿರ್ಲಾಪೂರ, ಶಿಕ್ಷಕರು ಮಕ್ಕಳ ಬಾಳಿನಲ್ಲಿ ಬೆಳಕು ಬೀರಬಲ್ಲ ಜ್ಯೋತಿಗಳು. ಶಿಕ್ಷಕರ ದಿನಾಚರಣೆಯ ಅಂಗವಾಗಿ ಗ್ರಾಮೀಣ ಹಾಗೂ ಶಹರ ವಲಯದ ವಿವಿಧ ಶಾಲೆಗಳ ಶಿಕ್ಷಕರನ್ನು ಆಯ್ಕೆ ಮಾಡಲಾಗಿದೆ. ಮುಖ್ಯವಾಗಿ ಕ್ಲಬ್‌ನ ದತ್ತು ಶಾಲೆ, ನನ್ನ ಶಾಲೆ ನನ್ನ ಕೊಡುಗೆ ಯಶಸ್ವಿ ಅನುಷ್ಠಾನ, ನಲಿ-ಕಲಿ ಬೋಧನೆಯ ಪೂರ್ಣತೆ, ಅತಿಥಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವವರು, 38 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದ, ನಿವೃತ್ತಿಯ ಅಂಚಿನಲ್ಲಿರುವ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕ ಶಿಕ್ಷಕ-ಶಿಕ್ಷಕಿಯರನ್ನು ಸನ್ಮಾನಿಸಿ ಇನ್ನಷ್ಟು ಸ್ಫೂರ್ತಿ ತುಂಬಲಾಯಿತು ಎಂದರು.

ಕಾರ್ಯಕ್ರಮದ ಪ್ರಾಯೋಜಕತ್ವವನ್ನು ಕ್ಲಬ್‌ನ ಮಾಜಿ ಅಧ್ಯಕ್ಷರಾದ ಅನ್ನಪೂರ್ಣ ವರವಿ, ಶಾಂತಾ ನಿಂಬಣ್ಣವರ, ಕ್ಲಬ್‌ನ ಸಹ ಕಾರ್ಯದರ್ಶಿ ಜ್ಯೋತಿ ದಾನಪ್ಪಗೌಡ್ರ, ಸದಸ್ಯರಾದ ಜಯಶ್ರೀ ಉಗಲಾಟ ವಹಿಸಿದ್ದರು. ನಂದಾ ಬಾಳಿಹಳ್ಳಿಮಠ ಇನ್ನರ್‌ವ್ಹೀಲ್ ಪ್ರಾರ್ಥನೆ ಮಾಡಿದರು. ಐಎಸ್‌ಓ ಪುಷ್ಪಾ ಭಂಡಾರಿ ನಿರೂಪಿಸಿದರು. ಕ್ಲಬ್‌ನ ಸಿಎಲ್‌ಸಿಸಿ ಸುಮಾ ಪಾಟೀಲ ವಂದಿಸಿದರು.

ಕಾರ್ಯಕ್ರಮದಲ್ಲಿ ಮೀನಾಕ್ಷಿ ಕೊರವನವರ, ಪೂಜಾ ಭೂಮಾ, ರಾಜೇಶ್ವರಿ ಬಳ್ಳಾರಿ, ಸುಶೀಲಾ ಕೋಟಿ, ಅನ್ನಪೂರ್ಣ ವರವಿ, ವೀಣಾ ಕಾವೇರಿ, ರೇಣುಕಾ ಅಮಾತ್ಯ, ಜಯಶ್ರೀ ಪಾಟೀಲ, ವಿದ್ಯಾ ಗಂಜಿಹಾಳ, ಸಂಗೀತಾ ಪಟ್ಟಣಶೆಟ್ಟಿ, ಸಾಗರಿಕಾ ಅಕ್ಕಿ, ಪ್ರಿಯಾಂಕಾ ಹಳ್ಳಿ, ಸುವರ್ಣಾ ಮದರಿಮಠ, ರೇಖಾ ರೊಟ್ಟಿ ಮುಂತಾದವರಿದ್ದರು.

ಅಧ್ಯಕ್ಷತೆ ವಹಿಸಿದ್ದ ಕ್ಲಬ್ ಅಧ್ಯಕ್ಷೆ ನಾಗರತ್ನ ಮಾರನಬಸರಿ ಸ್ವಾಗತಿಸಿ ಮಾತನಾಡಿ, ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ 51ನೇ ಜುಬೇಲಿ ವರ್ಷಾಚರಣೆಯಲ್ಲಿದೆ. ಸಮಾಜಮುಖಿಯಾಗಿ ಹಲವಾರು ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಯಶಸ್ವಿಗೊಳಿಸಲಾಗಿದೆ. ಶಿಕ್ಷಕರ ದಿನಾಚರಣೆಯ ಅಂಗವಾಗಿ ಕ್ಲಬ್‌ನ ಸದಸ್ಯರ ಸಹಮತದಿಂದ 51 ಶಿಕ್ಷಕ-ಶಿಕ್ಷಕಿಯರನ್ನು ವಿವಿಧ ಹಂತಗಳಲ್ಲಿ ಆಯ್ಕೆ ಮಾಡಿ ಸನ್ಮಾನಿಸಿ ಗೌರವಿಸಲಾಗಿದೆ ಎಂದರು.




ಬೆಟಗೇರಿ ಈದಗಾ ಕಮಿಟಿ ವತಿಯಿಂದ ಸೋಮವಾರ ನಡೆದ ಪ್ರವಾದಿ ಮುಹಮ್ಮದ ಪೈಗಂಬರ್ ಜಯಂತಿ ಕಾರ್ಯಕ್ರಮದಲ್ಲಿ ಮುಸ್ಲಿಂ ಧರ್ಮೀಯರ ಉಚಿತ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಶ್ರೀ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರನ್ನು ಸನ್ಮಾನಿಸಿ, ಗೌರವಿಸಿದರು. ಈ ಸಂದರ್ಭದಲ್ಲಿ ಬೆಟಗೇರಿ ಈದಗಾ ಕಮಿಟಿಯ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷರಾದ ಪೀರಸಾಬ ಕೌತಾಳ ಉಪಸ್ಥಿತರಿದ್ದರು.

# ಪೈಗಂಬರರ ಉಪದೇಶಗಳನ್ನು ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಅಂಜುಮನ್ ಏ ಇಸ್ಲಾಂ ಕಮಿಟಿಯ ಆಶ್ರಯದಲ್ಲಿ ಹಜರತ್ ಮುಹಮ್ಮದ್ ಪೈಗಂಬರ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು. ಜಯಂತಿಯ ನಿಮಿತ್ತ ಹಮ್ಮಿಕೊಂಡಿದ್ದ ಬೈಕ್ ರ್‍ಯಾಲಿಗೆ ಪಾಪನಾಶಿ ರಸ್ತೆಯಲ್ಲಿರುವ ಮೆಹಬೂಬ ಸುಬಾನಿ ದರ್ಗಾದ ಹತ್ತಿರ ಮೌಲಾನಾ ಸಲೀಂ ಸಖಾಫಿ ಅವರು ಚಾಲನೆ ನೀಡಿದರು. ಗ್ರಾಮದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ನಡೆಸಲಾಯಿತು. ಮೆರವಣಿಗೆಯಲ್ಲಿ ಮುಹಮ್ಮದ್



ಪೈಗಂಬರರ ತತ್ವ ಸಂದೇಶಗಳನ್ನು ಸಾರಲಾಯಿತು.

ಹಿರೇಮಸೂತಿಯ ಆವರಣದಲ್ಲಿ ನಡೆದ ಮುಹಮ್ಮದ್ ಪೈಗಂಬರ ಜಯಂತ್ಯುತ್ಸವದಲ್ಲಿ ಭಾಗವಹಿಸಿದ್ದ ಮೌಲಾನಾ ನಿಜಾಮ ಖಾದ್ರಿ ಮಾತನಾಡಿ, ದೇವನೊಬ್ಬ ನಾಮ ಹಲವು ಎಂದು ಹೇಳಿರುವ ಮುಹಮ್ಮದ್ ಪೈಗಂಬರರು, ಸರ್ವ ಸಮುದಾಯದವರು ಸ್ನೇಹ, ಭಾತೃತ್ವದಿಂದ ನಡೆದುಕೊಳ್ಳಬೇಕು ಎಂದು ಸಾರಿದ್ದಾರೆ. ಅವರ ತತ್ವೋಪದೇಶಗಳನ್ನು ಅಳವಡಿಸಿ ಕೊಳ್ಳಬೇಕು ಎಂದು ವಿವರಿಸಿದರು.

ಮೌಲಾನಾ ಸಲೀಂ ಸಖಾಫಿ, ಮೌಲಾನಾ ನಿಜಾಮ ಖಾದ್ರಿ ಅವರನ್ನು ಸನ್ಮಾನಿಸಲಾಯಿತು. ನಂತರ ಅನ್ನ ಸಂತರ್ಪಣೆ ಜರುಗಿತು. ಅಂಜುಮನ್ ಇಸ್ಲಾಂ ಕಮಿಟಿಯ ಉಪಾಧ್ಯಕ್ಷ ದಾದಾಪೀರಸಾಬ ಕೊರ್ಲಹಳ್ಳಿ, ಕಾರ್ಯದರ್ಶಿ ವಾಶಿಂಸಾಬ ಮಸೂತಿಮನಿ, ಸರ್ವ ಪದಾಧಿಕಾರಿಗಳು, ಸದಸ್ಯರು ಹಾಗೂ ಟಿಪ್ಪು ಸುಲ್ತಾನ ಯೂಥ್ ಕಮಿಟಿಯ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

# ಶ್ರೀ ಗುರು ಕುಮಾರೇಶ್ವರರ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಹೂವಿನ ಶಿಗ್ಲಿಯ ಶ್ರೀ ವಿರಕ್ತಮಠದಲ್ಲಿ ಹಾನಗಲ್ ಗುರು ಕುಮಾರೇಶ್ವರರ 157ನೇ ಜಯಂತ್ಯುತ್ಸವವನ್ನು ಭಾನುವಾರ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.




ಶ್ರೀಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಮಾತನಾಡಿ, ಯುವಪುರುಷ ಹಾನಗಲ್ಲ ಶ್ರೀ ಗುರು ಕುಮಾರೇಶ್ವರರು ಸಮಾಜದ ಉದ್ಧಾರಕ್ಕಾಗಿ ಜನಿಸಿದ ಸಮಾಜದ ಸಂಜೀವಿನಿಯಾಗಿದ್ದಾರೆ. ಧರ್ಮ, ಶಿಕ್ಷಣ, ಸಂಗೀತ, ಸಂಸ್ಕಾರ, ಯೋಗ ಕ್ಷೇತ್ರಗಳಿಗೆ ಅವರು ನೀಡಿದ ಕೊಡುಗೆ ಅಮೋಘ. ಅವರು ಸ್ಥಾಪಿಸಿದ ವೀರಶೈವ ಮಹಾಸಭಾ ಮತ್ತು ಶಿವಯೋಗ ಮಂದಿರ ಈಗಲೂ ನಾಡಿಗೆ ಶ್ರೇಷ್ಠ ಶರಣರು, ಮಠಾಧೀಶರನ್ನು ನಾಡಿಗೆ ನೀಡುವ ಆಧ್ಯಾತ್ಮದ ಶಕ್ತಿ ಕೇಂದ್ರವಾಗಿದೆ. ದೇಶದಾದ್ಯಂತ ಸಂಚಾರ ಮಾಡಿ ಭಕ್ತರ ಉದ್ಧಾರಕ್ಕಾಗಿ ತಮ್ಮ ಜೀವನವನ್ನು ಸಮಾಜಕ್ಕಾಗಿ ಮೀಸಲಿಟ್ಟ ಶ್ರೇಷ್ಠ ಸನ್ಯಾಸಿಗಳು ಹಾನಗಲ್ಲ ಗುರು ಕುಮಾರೇಶ್ವರ ಮಹಾಸ್ವಾಮಿಗಳು. ಅವರ ತತ್ವ ಚಿಂತನೆಗಳನ್ನ ಪ್ರಸ್ತುತ ಆಧುನಿಕ ಯುಗದಲ್ಲಿ ಪ್ರತಿಯೊಬ್ಬರೂ ಅಳವಡಿಸಿಕೊಳ್ಳುವ ಮೂಲಕ ತಮ್ಮ ಜೀವನವನ್ನು ಸುಂದರವಾಗಿಸಲು ಸಾಧ್ಯವಾಗುತ್ತದೆ ಎಂದರು.

ಈ ವೇಳೆ ಭಕ್ತರಾದ ಪಿ.ಹೆಚ್. ಪಾಟೀಲ, ಕಿರಣ ಕುಬಸದ, ಶಾಂತಪ್ಪ ರಾಮಗೇರಿ, ಉಮೇಶ ಮಾಗಡಿ, ಶಿವಲಿಂಗಯ್ಯ ಹಿರೇಮಠ, ಶಿವಾನಂದ ಕಟ್ಟಿಮನಿ ಸೇರಿ ಶ್ರೀ ಮಠದ ಗುರುಕುಲದ ವಿದ್ಯಾರ್ಥಿಗಳು, ಸದ್ಭಕ್ತರು ಭಾಗವಹಿಸಿದ್ದರು.

### ವಿಶೇಷ ಘಟಕ, ಗಿರಿಜನ ಉಪಯೋಜನೆ ಅಡಿಯಲ್ಲಿ ಕಾರ್ಯಕ್ರಮ

# ಲಲಿತಕಲಾ ಕಾರ್ಯಾಗಾರ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲಲಿತ ಕಲಾ ಅಕಾಡೆಮಿ ಬೆಂಗಳೂರು ಯುವ ಕಲಾವಿದರಿಗೆ ವಿಜಯ ಕಾಲೇಜ್ ಆಫ್ ಫೈನ್ ಆರ್ಟ್ ಸಹಕಾರದೊಂದಿಗೆ ಸೆಪ್ಟಂಬರ್ 17ರಿಂದ 20ರವರೆಗೆ ವಿಶೇಷ ಘಟಕ ಹಾಗೂ ಗಿರಿಜನ ಉಪಯೋಜನೆ ಅಡಿಯಲ್ಲಿ ವಿಜಯನಗರ ಸಾಂಪ್ರದಯಕ ಶೈಲಿ ಕಾರ್ಯಾಗಾರವನ್ನು ರಾಜೀವಗಾಂಧಿ ನಗರದ ವಿಜಯ ಲಲಿತಕಲಾ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದೆ.

ಕಲಾವಿದ ಕಮಲ್ ಅಹ್ಮದ ಮಾಳೆಕೊಪ್ಪ ಶಿಬಿರದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಲಿದ್ದಾರೆ. ಪ್ರೊ. ಬಸವರಾಜ ನೆಲಜೇರಿ ಪ್ರೊ. ಬಸವರಾಜ ಕುತ್ನಿ ಚಿತ್ರಕಲಾ ಪರಂಪರೆ ಹಾಗೂ ಸಾಂಪ್ರದಾಯಕ ಕಲೆಗಳ ಕುರಿತು ಉಪನ್ಯಾಸ ನೀಡಲಿದ್ದಾರೆ.



ಕಾರ್ಯಕ್ರಮವನ್ನು ಹಿರಿಯ ಕಲಾವಿದರು ವಿಜಯ ಲಲಿತಕಲಾ ಸಂಸ್ಥೆಯ ಅಧ್ಯಕ್ಷ ಪ್ರೊ. ಅಶೋಕ ಅಕ್ಕಿ ಉದ್ಘಾಟಿಸಲಿದ್ದಾರೆ. ಕರ್ನಾಟಕ ಲಲಿತಕಲಾ ಅಕಾಡೆಮಿ ಅಧ್ಯಕ್ಷರಾದ ಪ.ಸ. ಕುಮಾರ ಅಧ್ಯಕ್ಷತೆ ವಹಿಸಲಿದ್ದಾರೆ. ರೋಟರಿ ಸಂಸ್ಥೆಯ ಕಾರ್ಯದರ್ಶಿಗಳಾದ ಪ್ರೊ. ಸಂತೊಷ ಎ., ಪ್ರಾಚಾರ್ಯರಾದ ಡಾ. ಸಿ.ವಿ. ಬಡಿಗೇರ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಆಯ್ಕೆಯಾದ 20 ಜನ ಯುವಕಲಾವಿದರು ಆಗಮಿಸಲಿದ್ದಾರೆ. ಕಮಲ್ ಅಹ್ಮದ ಉಪಸ್ಥಿತಿ ವಹಿಸಲಿದ್ದಾರೆ.

ರಾಘವೇಂದ್ರ, ಅಕ್ಷತಾ ಭಜಂತ್ರಿ, ಅಖಿಲೇಶ ದೊಡ್ಡಮನಿ, ರಾಘವೇಂದ್ರ ಸಂದಿಮನಿ, ಸೌಮ್ಯ ಎಸ್, ನಿಖಿಲ್ ವಾಗ್ಮೋರೆ, ರಮೇಶ ಕೊಪ್ಪದ, ನಿತೇಶ, ನಾಗರಾಜು, ಸುಲೋಚನಾ, ಅರುಣ ಲಮಾಣಿ, ಮರಿಯಪ್ಪ ಮಳ್ಳೂರ, ಕಟ್ಟೆ ಹುಸೇನಿ, ಸವಿತಾ ಸಂತಪ್ಪನವರ, ವಸಂತ, ವೆಂಕಟೇಶ ಪೆಳಕರ, ತೇಜಸ್ವಿನಿ, ಸವಿತ ಬೆಣಗಿ, ಮಾರುತಿ ನಾಯಕ, ಬಸವರಾಜ ತಳವಾರ ಈ ಎಲ್ಲಾ ಯುವ ಕಲಾವಿದರು ಭಾಗವಹಿಸಲಿದ್ದಾರೆ.

ನಂತರ ವಿಜಯ ಲಲಿತಕಲಾ ಕಾಲೇಜು ಹಾಗೂ ಜಿಲ್ಲಾ ಚಿತ್ರಕಲಾ ಶಿಕ್ಷಕರ ಸಂಘ ಗದಗ ಇವುಗಳ ಸಹಯೋಗದಲ್ಲಿ ಅಕಾಡೆಮಿ ಅಧ್ಯಕ್ಷರಾದ ಪ.ಸ. ಕುಮಾರ ಅವರೊಂದಿಗೆ ಕಲಾ ಕ್ಷೇತ್ರದ ಕುರಿತು ಚಿಂತನ ಕೂಟವನ್ನು ಆಯೋಜಿಸಲಾಗಿದೆ. ನಗರದ ಕಲಾವಿದರು, ಕಲಾಭಿಮಾನಿಗಳು ಕಲಾಸಕ್ತರು ಇದರ ಸದುಪಯೋಗ ಪಡೆಯಲು ಪ್ರಾಚಾರ್ಯರು ಹಾಗೂ ಶಿಬಿರದ ಸದಸ್ಯ ಸಂಚಾಲಕರಾದ ಚಂದ್ರಕಾಂತ ಸರೋದೆ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿದ್ದಾರೆ.

# ಇಂದು ಪುಟ್ಟರಾಜ ಗವಾಯಿಗಳ 14ನೇ ಪುಣ್ಯ ಸ್ಮರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗಾನ ಗಂಧರ್ವ ಕಲಾ ಟ್ರಸ್ಟ್ ಗದಗ ಹಾಗೂ ಜ್ಞಾನಜ್ಯೋತಿ ಕಲಾ ಟ್ರಸ್ಟ್ ಗದಗ ಸಹಯೋಗದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರ ಸಹಕಾರದಲ್ಲಿ,

ಪದ್ಮಭೂಷಣ ಡಾ.ಪಂ ಪುಟ್ಟರಾಜ ಕವಿ ಗವಾಯಿಗಳವರ14ನೇ ಪುಣ್ಯ ಸ್ಮರಣೋತ್ಸವ ಹಾಗೂ ನಾದಶ್ರೀ ಸಂಗೀತ ಪಾಠ ಶಾಲೆ ವಾರ್ಷಿಕೋತ್ಸವ ಸೆಪ್ಟೆಂಬರ್ 17 ರಂದು ಮಂಗಳವಾರ ಸಂಜೆ 6 ಗಂಟೆಗೆ ವಿವೇಕಾನಂದ ನಗರದ ನಾದಶ್ರೀ ಸಂಗೀತ ಪಾಠಶಾಲೆ ಆವರಣದಲ್ಲಿ ನಡೆಯಲಿದೆ ಎಂದು ಗಾನ ಗಂಧರ್ವ ಕಲಾ ಟ್ರಸ್ಟ್ ಕಾರ್ಯದರ್ಶಿ ಸಿದ್ದಲಿಂಗಯ್ಯ ಶಾಸ್ತ್ರೀ



ಗಡ್ಡದಮಠ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕುಷ್ಟಗಿ ದುರ್ಗಾಪರಮೇಶ್ವರಿ ಆಶ್ರಮದ ಸದಾನಂದ ಮಹಾಸ್ವಾಮಿಗಳು, ಸಮ್ಮುಖ ಮುಂಡರಗಿ ಬೃಹನ್ಮಠದ ಡಾ.ವೀರೇಶ್ವರ ಶರಣರು, ಅಧ್ಯಕ್ಷತೆಯನ್ನು ನಿವೃತ್ತ ಮ್ಯಾನೇಜರ್ ಮೃತ್ಯುಂಜಯ ಎಸ್ ಹಿರೇಮಠ, ಉದ್ಘಾಟನೆಯನ್ನು ಧಾರವಾಡ ಆಕಾಶವಾಣಿಯ ಉದ್ಘೋಷಕರು ಸುರೇಖಾ ಸುರೇಶ, ಅತಿಥಿಗಳಾಗಿ ಗದಗ ಆಯುರ್ವೇದ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಚಾರ್ಯ ಡಾ, ಉಮೇಶ ಪುರದ ಬಾಗವಹಿಸಿಲಿದ್ದಾರೆ. ಕಾರ್ಯಕ್ರಮದಲ್ಲಿ ಸ್ವರ ನಮನ ಕಾರ್ಯಕ್ರಮ ಹಾಗೂ ನಾದಶ್ರೀ ಸಂಗೀತ ಪಾಠಶಾಲೆ ಮಕ್ಕಳಿಂದ ಸಮೂಹ ಗೀತೆ ಹಾಗೂ ಸಮೂಹ ನೃತ್ಯ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗದಗ ನಗರದ ಲಕ್ಷೀ ಚಾಳ ಯುವಕರಿಂದ ಪ್ರವಾದಿ ಮುಹಮ್ಮದ್ ಪೈಗಂಬರ್ ಜಯಂತಿಯ ಅಂಗವಾಗಿ ಹಳೆ ಬಸ್ ನಿಲ್ದಾಣದ ಹಿಂದುಗಡೆ ಸಾರ್ವಜನಿಕರಿಗೆ ಶರಬತ್, ಪಾನೀಯ ವಿತರಿಸಿದರು. ವಿತರಣಾ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಯುವ ಮುಖಂಡ ಸಚಿನಗೌಡ ಪಾಟೀಲ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ರಫೀರ ಅಬ್ಬಿಗೇರಿ, ಯಮನೂರ, ರಫೀಕ ಎಸ್, ಜಾವೀಧ್ ಕೆ, ಜುಬೇರ ಎಲ್, ಯುನೂಸ್ ಜೆ, ರಬ್ಬಾನಿ ಕೆ, ದಾವುದ್ ಎಂ, ವಿನಾಯಕ ಪಿ, ಉಮರ್ ಎನ್, ಪ್ರಾಶಾಂತ ಎಂ, ಅಬ್ಬಾಸ್ ಅಲಿ, ಸತೀಶ್, ಮುಸ್ತಫಾ ಕೆ, ಇಲಿಯಾಸ್ ಎಂ, ಅರ್ಶದ್ ಎ, ಅಶ್ರಫ್ ಎ, ಗಂಗಾಧರ ಮುಂತಾದವರು ಇದ್ದರು.

# ಕಪ್ಪಾಗಿದ್ದಾಳೆಂದು ರೂಪದ ಬಗ್ಗೆ ಅವಮಾನ: ಗಂಡನ ಚುಚ್ಚು ಮಾತಿಗೆ ಮನನೊಂದು ಪತ್ನಿ ಸೂಸೈಡ್!

■ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿಯ ನವವಿವಾಹಿತೆಯೊಬ್ಬರು ಮದುವೆಯಾಗಿ 7 ತಿಂಗಳಲ್ಲೇ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಆಕೆಯ ಅತ್ತೆ, ಮಾವ, ಮೈದುನ, ಗಂಡ ವರದಕ್ಷಿಣೆಗಾಗಿ ತಮ್ಮ ಮಗಳನ್ನು ಪೀಡಿಸುತ್ತಿದ್ದರು ಎಂದು ಮೃತ ಮಹಿಳೆಯ ಪೋಷಕರು ಆರೋಪಿಸಿದ್ದಾರೆ.

ಬಿಂದುಶ್ರೀ ಎಂಬ 22 ವರ್ಷದ ಮಹಿಳೆ ಆತ್ಮಹತ್ಯೆ ಮಾಡಿಕೊಂಡ ನವವಿವಾಹಿತೆ. ಆಕೆಯ ಗಂಡ ರಾಘವೇಂದ್ರ ಹೆಚ್.ಎಂ., ಮಾವ ಎನ್.ಮುನಿರಾಜ, ಅತ್ತೆ ಲತಾ ಹಾಗೂ ನರಸಿಂಹಯ್ಯ ವಿರುದ್ಧ ಪ್ರಕರಣ ದಾಖಲಾಗಿದೆ.

ಬಿಂದುಶ್ರೀ ಅವರ ಗಂಡ ರಾಘವೇಂದ್ರ ಸರ್ಕಾರಿ ಸೌಮ್ಯದ ಪ್ರತಿಷ್ಠಿತ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಾರೆ. ಇದಿಷ್ಟೇ ಅಲ್ಲದೆ, ಮಗಳ ಆತ್ಮಹತ್ಯೆಯಿಂದ ಆಘಾತಗೊಂಡ ಮೃತ ಮಹಿಳೆಯ ತಂದೆ ಕೂಡ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.ಬಿಂದುಶ್ರೀ ಕಪ್ಪಗಿದ್ದಾರೆ ಎಂದು ಆಕೆಯನ್ನು ಅವಮಾನಿಸಿ ವರದಕ್ಷಿಣಿ ಕಿರುಕುಳ ನೀಡಿರುವ ಆರೋಪ ಆಕೆಯ ಗಂಡನ ಮನೆಯವರ ಮೇಲೆ ಕೇಳಿ ಬಂದಿದೆ. 20 ಲಕ್ಷ ರೂಪಾಯಿ ಹಣ ಕೊಡುವಂತೆ ಕಿರುಕುಳ ಆರೋಪ ಕೇಳಿ ಬಂದಿದೆ.

